ಸಂಪುಟ : 9 ಸಂಚಿಕೆ 276 ಪುಟ : 4 ಬೆಲೆ: 3.00 ಶನಿವಾರ ಡಿಸೆಂಬರ್ 14 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 276 Pages : 4 Price : 3.00 Saturday December 14 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

### ಪ್ರವಾಸೋದ್ಯಮ ನೀತಿ 2020-26ರಡಿ 44 ಪ್ರವಾಸಿ ತಾಣಗಳ ಗುರುತು: ಸಚಿವ ಎಚ್.ಕೆ. ಪಾಟೀಲ್

# ಬಾಗಲಕೋಟೆ, ವಿಜಯಪುರ ಜಿಲ್ಲೆಯಲ್ಲಿ ಪ್ರವಾಸೋದ್ಯಮಕ್ಕೆ ಕ್ರಮ

**■ವಿಜಯಸಾಕ್ಷಿ ಸುದ್ದಿ, ಬೆಳಗಾವಿ-ಸುವರ್ಣಸೌಧ**

ಪ್ರವಾಸೋದ್ಯಮ ನೀತಿ 2020-26ರನ್ವಯ ರಾಜ್ಯದಲ್ಲಿ 810 ಪ್ರವಾಸಿ ತಾಣಗಳನ್ನು ಗುರುತಿಸಲಾಗಿದ್ದು, ಬಾಗಲಕೋಟೆ, ವಿಜಯಪುರ ಜಿಲ್ಲೆಯಲ್ಲಿ 44 ಪ್ರವಾಸಿ ತಾಣಗಳನ್ನು ಗುರುತಿಸಲಾಗಿದೆ ಎಂದು ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವ ಎಚ್.ಕೆ. ಪಾಟೀಲ್ ಹೇಳಿದರು.

ಅವರು ಶುಕ್ರವಾರ ವಿಧಾನ ಪರಿಷತ್ತಿನಲ್ಲಿ ಸದಸ್ಯರಾದ ನಿರಾಣಿ ಹನುಮಂತ ರುದ್ರಪ್ಪ ಹಾಗೂ ಕೇಶವ ಪ್ರಸಾದ್ ಅವರ ಗಮನ ಸೆಳೆಯುವ ಸೂಚನೆಗೆ ಉತ್ತರಿಸಿದರು.

ಪ್ರವಾಸೋದ್ಯಮವನ್ನು ಉತ್ತೇಜಿಸಿ ಅಭಿವೃದ್ಧಿಪಡಿಸುವ ದೃಷ್ಟಿಯಿಂದ ವಿಜಯಪುರ ಪೂರ್ಣ ಜಿಲ್ಲೆಯನ್ನು ಹಾಗೂ ಬಾಗಲಕೋಟೆ ಜಿಲ್ಲೆಯ ಐಹೊಳೆ, ಬದಾಮಿ, ಪಟ್ಟದಕಲ್ಲು, ಕೂಡಲಸಂಗಮ, ಬೀಳಗಿ ತಾಣಗಳನ್ನು ಆದ್ಯತಾ ಪ್ರವಾಸಿ ತಾಣಗಳಾಗಿ ಗುರುತಿಸಿ, ಈ ತಾಣಗಳ ತಾಲೂಕುಗಳಲ್ಲಿ ಬಂಡವಾಳ ಹೂಡಲು ಮುಂದೆ ಬರುವ ಖಾಸಗಿ ಹೂಡಿಕೆದಾರರಿಗೆ ಸಹಾಯಧನ, ರಿಯಾಯಿತಿ ಮತ್ತು ಉತ್ತೇಜನಗಳನ್ನು ನೀಡಲು ಅವಕಾಶ ಕಲ್ಪಿಸಲಾಗಿತ್ತು ಎಂದರು.

ಪ್ರಸ್ತುತ ಜಾರಿಗೆ ತಂದಿರುವ 2024-29ರ ನೂತನ ಕರ್ನಾಟಕ ಪ್ರವಾಸೋದ್ಯಮ ನೀತಿಯಲ್ಲಿ ಬಾಗಲಕೋಟೆ ಹಾಗೂ ವಿಜಯಪುರ ಜಿಲ್ಲೆಗಳಲ್ಲಿ ಪ್ರವಾಸೋದ್ಯಮ ಅಭಿವೃದ್ಧಿಗೆ ಪ್ರವಾಸೋದ್ಯಮ ಕ್ಷೇತ್ರದ ಯೋಜನೆಗಳಲ್ಲಿ ಹೂಡಿಕೆ ಮಾಡಲು ಮುಂದೆ ಬರುವ ಖಾಸಗಿ



ಉದ್ಯಮಿಗಳಿಗೆ ಶೇ.5ರಷ್ಟು ಹೆಚ್ಚುವರಿ ಸಹಾಯಧನ ಸೌಲಭ್ಯಗಳನ್ನು ಒದಗಿಸಲು ಅವಕಾಶ ಕಲ್ಪಿಸಲಾಗಿದೆ. ಇದಲ್ಲದೆ, ಸದರಿ ಜಿಲ್ಲೆಗಳಲ್ಲಿನ ಪ್ರವಾಸಿ ತಾಣಗಳನ್ನು ನೂತನ ಆದ್ಯತಾ ಪ್ರವಾಸಿ ತಾಣಗಳಾಗಿ ಗುರುತಿಸಲು ಕ್ರಮವಹಿಸಲಾಗುವುದು ಎಂದರು.

ಬಾಗಲಕೋಟೆ ಜಿಲ್ಲೆಯ ಐಹೊಳೆ ಗ್ರಾಮದ ಐತಿಹಾಸಿಕ ಮತ್ತು ಪಾರಂಪರಿಕ ಸ್ಮಾರಕಗಳನ್ನು ಸಂರಕ್ಷಿಸುವ ಸಲುವಾಗಿ ಸ್ಮಾರಕಗಳನ್ನೇ ಮನೆಗಳನ್ನಾಗಿ ಪರಿವರ್ತಿಸಿಕೊಂಡು ವಾಸ ಮಾಡುತ್ತಿರುವ ಸುಮಾರು 135 ಕುಟುಂಬಗಳನ್ನು ಸ್ಥಳಾಂತರಿಸಿ, ಪುನರ್ ವಸತಿ ಕಲ್ಪಿಸುವ ದೃಷ್ಟಿಯಿಂದ ಐಹೊಳೆ ಗ್ರಾಮದ ಭೂ-ಮಾಲೀಕರಿಂದ ಜಮೀನನ್ನು ಖರೀದಿಸಿ ಸ್ಥಳಾಂತರಿಸಲು ರೂ. 3.50 ಕೋಟಿ ಅನುದಾನವನ್ನು ಚಾಲುಕ್ಯ ಪಾರಂಪರಿಕ ಪ್ರದೇಶ ನಿರ್ವಹಣಾ ಪ್ರಾಧಿಕಾರಕ್ಕೆ ಬಿಡುಗಡೆಗೊಳಿಸಲಾಗಿದೆ. 135 ಕುಟುಂಬಗಳು ಪುನರ್ವಸತಿಗೆ ಒಪ್ಪಿಗೆಯನ್ನು ಮತ್ತು ಈ ಕಾರ್ಯಕ್ಕೆ ರೈತರು ಜಮೀನನ್ನು ನೀಡಲು ಒಪ್ಪಿಗೆ ಸೂಚಿಸಿದ್ದು, ಮುಂದಿನ ಪ್ರಕ್ರಿಯೆ ಪ್ರಗತಿಯಲ್ಲಿದೆ ಎಂದರು.

ಈ 135 ಕುಟುಂಬಗಳನ್ನು ಸ್ಥಳಾಂತರಿಸಿ, ಪುನರ್ ವಸತಿ ಕಲ್ಪಿಸಿದ ನಂತರ ಎಂಟು ಸ್ಮಾರಕಗಳ ಸಂರಕ್ಷಣೆಯನ್ನು ಅಂದಾಜು ರೂ. 8-10 ಕೋಟಿಗಳ ವೆಚ್ಚದಲ್ಲಿ ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ಧರ್ಮೋತ್ಥಾನ ಟ್ರಸ್ಟ್ ಶೇ.50 ಮತ್ತು ಸರ್ಕಾರದ ವಂತಿಗೆ ಶೇ.50ರಷ್ಟು ಅನುಪಾತದಲ್ಲಿ ವೆಚ್ಚವನ್ನು ಭರಿಸಿ ಸದರಿ ಟ್ರಸ್ಟ್ ವತಿಯಿಂದ ಸಂರಕ್ಷಣೆಯನ್ನು ಕೈಗೊಳ್ಳಲು ಚಾಲುಕ್ಯ ಪಾರಂಪರಿಕ ಪ್ರದೇಶ ನಿರ್ವಹಣಾ ಪ್ರಾಧಿಕಾರ, ಪುರಾತತ್ವ ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆ ಹಾಗೂ ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ಧರ್ಮೋತ್ಥಾನ ಟ್ರಸ್ಟ್‌ಗಳ ನಡುವೆ ತ್ರಿಪಕ್ಷೀಯ ಒಡಂಬಡಿಕೆ ಮಾಡಿಕೊಳ್ಳಲಾಗಿದೆ ಎಂದರು.

ಪ್ರವಾಸೋದ್ಯಮವನ್ನು ಅಭಿವೃದ್ಧಿಪಡಿಸಲು ವಿಜಯಪುರ ಜಿಲ್ಲೆಯ ಭೂತನಾಳ ಕೆರೆಯ ಪ್ರದೇಶದಲ್ಲಿ ರೂ.1674.00 ಲಕ್ಷಗಳ ಅಂದಾಜು ವೆಚ್ಚದಲ್ಲಿ 75 ಕೊಠಡಿಗಳ ತ್ರಿಸ್ಟಾರ್ ಹೋಟೆಲ್ ಕಾಮಗಾರಿ ಅನುಮೋದನೆ ನೀಡಿದೆ. ರೂ.1669.83 ಲಕ್ಷಗಳ ಅನುದಾನವನ್ನು ಅನುಷ್ಠಾನ ಸಂಸ್ಥೆಗೆ ಬಿಡುಗಡೆ ಮಾಡಲಾಗಿದ್ದು, ಕಾಮಗಾರಿ ಅಂತಿಮ ಹಂತದಲ್ಲಿದೆ ಎಂದರು

ಬಾಗಲಕೋಟೆ ಜಿಲ್ಲೆಯಲ್ಲಿ ಪ್ರವಾಸೋದ್ಯಮ ಅಭಿವೃದ್ಧಿ ಸಂಬಂಧ ಬಂಡವಾಳ ವೆಚ್ಚಗಳು ಹಾಗೂ ಕೆ.ಟಿ.ವಿ.ಜಿ ಲೆಕ್ಕ ಶೀರ್ಷಿಕೆಯಡಿ ಕಳೆದ 5 ವರ್ಷಗಳಲ್ಲಿ ಇಲಾಖೆಯಿಂದ ರೂ.6793.00 ಲಕ್ಷಗಳ ಅಂದಾಜು ವೆಚ್ಚದಲ್ಲಿ 17 ಕಾಮಗಾರಿಗಳನ್ನು ಕೈಗೊಂಡಿದೆ. ರೂ.3688.99 ಲಕ್ಷಗಳ ಅನುದಾನವನ್ನು ಸಂಬಂಧಪಟ್ಟ ಅನುಷ್ಠಾನ ಸಂಸ್ಥೆಗಳಿಗೆ ಬಿಡುಗಡೆ ಮಾಡಲಾಗಿದ್ದು ಕಾಮಗಾರಿಗಳು ವಿವಿಧ ಹಂತದಲ್ಲಿವೆ ಎಂದರು.

ವಿಜಯಪುರ ಜಿಲ್ಲೆಯಲ್ಲಿ ಪ್ರವಾಸೋದ್ಯಮ ಅಭಿವೃದ್ಧಿ ಸಂಬಂಧ ಬಂಡವಾಳ ವೆಚ್ಚಗಳು ಹಾಗೂ ಕೆ.ಟಿ.ವಿ.ಜಿ ಲೆಕ್ಕಶೀರ್ಷಿಕೆ ಅಡಿ ಕಳೆದ 5 ವರ್ಷಗಳಲ್ಲಿ ಇಲಾಖೆಯಿಂದ ರೂ.3569.00 ಲಕ್ಷಗಳ ಅಂದಾಜು ವೆಚ್ಚದಲ್ಲಿ 26 ಕಾಮಗಾರಿಗಳನ್ನು ಕೈಗೊಂಡಿದ್ದು, ರೂ.2445.88 ಲಕ್ಷಗಳ ಅನುದಾನವನ್ನು ಸಂಬಂಧಪಟ್ಟ ಅನುಷ್ಠಾನ ಸಂಸ್ಥೆಗಳಿಗೆ ಬಿಡುಗಡೆ ಮಾಡಲಾಗಿದೆ ಎಂದರು.

> ಪಟ್ಟದಕಲ್ಲು ಪ್ರವಾಸಿ ತಾಣದಲ್ಲಿ ಪ್ರವಾಸಿಗರಿಗೆ ಪಾರ್ಕಿಂಗ್ ಸೌಲಭ್ಯ, ಕೆಫೆಟೇರಿಯಾ, ಪ್ರವಾಸಿ ಮಾಹಿತಿ ಕೇಂದ್ರ, ಕರಕುಶಲ ಮಳಿಗೆ ಇತ್ಯಾದಿ ಸೌಲಭ್ಯಗಳನ್ನು ಒಂದೇ ಸೂರಿನಲ್ಲಿ ಒದಗಿಸಲು ರೂ.29.25 ಕೋಟಿ ಅಂದಾಜು ವೆಚ್ಚದಲ್ಲಿ ಪ್ರವಾಸಿ ಪ್ಲಾಜಾ ಕಾಮಗಾರಿಯನ್ನು ಕೈಗೊಳ್ಳಲಾಗುತ್ತಿದೆ. ಪ್ರವಾಸೋದ್ಯಮವನ್ನು ಅಭಿವೃದ್ಧಿಪಡಿಸಲು ಬಾಗಲಕೋಟೆ ಜಿಲ್ಲೆಯ ಬದಾಮಿಯಲ್ಲಿ 72 ಕೊಠಡಿಗಳ ತ್ರಿ-ಸ್ಟಾರ್ ಹೋಟೆಲ್ ನಿರ್ಮಾಣ ಕಾಮಗಾರಿಯನ್ನು ರೂ. 1832.00 ಲಕ್ಷಗಳ ಅಂದಾಜು ವೆಚ್ಚದಲ್ಲಿ ಕೈಗೊಳ್ಳಲು ಅನುಮೋದನೆ ನೀಡಿರುತ್ತದೆ. ರೂ 987.00 ಲಕ್ಷಗಳ ಅನುದಾನವನ್ನು ಅನುಷ್ಠಾನ ಸಂಸ್ಥೆಗೆ ಬಿಡುಗಡೆ ಮಾಡಲಾಗಿದ್ದು, ಕಾಮಗಾರಿ ಪ್ರಗತಿಯಲ್ಲಿದೆ ಎಂದು ಸಚಿವ ಎಚ್.ಕೆ. ಪಾಟೀಲ ತಿಳಿಸಿದರು.

# ದತ್ತಾತ್ರೇಯ ಮಹಾರಾಜರ ಜಯಂತಿ ನಾಳೆ

**■ವಿಜಯಸಾಕ್ಷಿ ಸುದ್ದಿ, ಗದಗ**

ಶ್ರೀ ಗುರು ದತ್ತಾತ್ರೇಯ ಮಹಾರಾಜರ ಜಯಂತ್ಯುತ್ಸವದ ನಿಮಿತ್ತ ಡಿ. 15ರಂದು ಲೋಕಕಲ್ಯಾಣಾರ್ಥವಾಗಿ ವಿವಿಧ ಧಾರ್ಮಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ಎಂದು ಕ್ಷತ್ರಿಯ ಬ್ರಿಗೇಡ್ ಫೌಂಡೇಶನ್ ಅಧ್ಯಕ್ಷ ಆರ್.ಟಿ. ಕಬಾಡಿ ತಿಳಿಸಿದರು.




ನಗರದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸತತ 7 ವರ್ಷಗಳಿಂದ ಗುರು ದತ್ತಾತ್ರೇಯ ಮಹಾರಾಜರ ಜಯಂತಿ ಆಚರಿಸಲಾಗುತ್ತಿದ್ದು, ಡಿ. 15ರಂದು ಬೆಳಗ್ಗೆ 8 ಗಂಟೆಗೆ ಶ್ರೀ ಗುರು ದತ್ತಾತ್ರೇಯ ಜನ್ಮೋತ್ಸವ, ತೊಟ್ಟಿಲೋತ್ಸವ, ನಾಮಕರಣ ಪೂಜಾ ಉತ್ಸವ, ಸಾಮೂಹಿಕ ಶ್ರೀ ಗುರುದತ್ತ ಬೀಜಮಂತ್ರ ಪಠಣ ಹಾಗೂ ಗುರುದತ್ತ ಮಹಾಯಾಗ ಮತ್ತು ಮಹಾಪ್ರಸಾದ ಸೇವೆ ಜರುಗಲಿದೆ ಎಂದು ವಿವರಿಸಿದರು.

ಹಿಮಾಚಲಪ್ರದೇಶ ಮಧುವನದ ಪೂಜ್ಯ ಪ್ರಕಾಶ ಸ್ವಾಮೀಜಿ ಅವಧೂತ ಸಾನ್ನಿಧ್ಯ ವಹಿಸುವರು. ರತ್ನಾಕರ ಭಟ್ ಜೋಶಿ ಚಾಲನೆ ನೀಡಲಿದ್ದಾರೆ. ಶ್ರೀ ಗುರುದತ್ತ ಉತ್ಸ ಸಮಿತಿ ಚೇರಮನ್ ಸಾಗರ ಪವಾರ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಡಿ.ಸಿ. ಬಾಕಳೆ, ಸಾವಯವ ಕೃಷಿಕ ಗುರುನಾಥಗೌಡ ಓದುಗೌಡ್ರ, ಸಂಗಮೇಶ ಕವಳಿಕಾಯಿ ಆಗಮಿಸಲಿದ್ದಾರೆ. ಇದೇ ಸಂದರ್ಭದಲ್ಲಿ ವಿವಿಧ ಕ್ಷೇತ್ರದಲ್ಲಿ ಸಾಧನೆ ಮಾಡಿದ ಅಂಬಾಸಾ ಕಬಾಡಿ, ಸಹಸ್ರಾರ್ಜುನ ಸೇವಾ ಟ್ರಸ್ಟ್, ನಾಗೋಸಾ ಬಾಂಡಗೆ, ನರಸಿಂಗಸಾ ಹಬೀಬ ಪರಿವಾರ, ಸುರೇಶ ಹಾವನೂರ ಗುರುನಾಥಗೌಡ ಓದುಗೌಡ್ರ, ಚನ್ನಮ್ಮ ಪಳಕಣ್ಣವರ, ಜಯಶ್ರೀ ರಂಗ್ರೇಜಿ, ಚನ್ನಪ್ಪ ನಾರಾಯಣ ಪೂಜಾರ ಅವರಿಗೆ 'ಕ್ಷಾತ್ರ ರತ್ನ' ಪ್ರಶಸ್ತಿ ಪ್ರದಾನ ನಡೆಯಲಿದೆ. ಪಾರಂಪರಿಕ ವೈದ್ಯ ಬಸವರಾಜ ಕೊಂಚಿಗೇರಿ ಅವರಿಗೆ ಮರಣೋತ್ತರ 'ವೈದ್ಯ ರತ್ನ' ಪ್ರಶಸ್ತಿ ಪ್ರದಾನ ನಡೆಯಲಿದೆ ಎಂದು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಭೀಮು ಹಬೀಬ, ಎನ್.ಎಸ್. ಪಾಟೀಲ, ಕಾಶಿನಾಥಸಾ ಶಿದ್ಲಿಂಗ್, ಸಾಗರ ಪವಾರ, ನಾರಾಯಣ ನಿರಂಜನ, ಶಂಕರಸಾ ಕಲಬುರ್ಗಿ, ದೀಪಕ ಪವಾರ ಉಪಸ್ಥಿತರಿದ್ದರು.

### ಡಿ.15ರಂದು ರೋಣದಲ್ಲಿ ನೆರವೇರಲಿರುವ ವಿವಿಧ ಅಭಿವೃದ್ಧಿ ಕಾಮಗಾರಿಗಳ ಉದ್ಘಾಟನಾ ಕಾರ್ಯಕ್ರಮದ ಪೂರ್ವಭಾವಿ ಸಭೆ

# ವಿಶೇಷ ಆಸಕ್ತಿಯಿಂದ ಕೆಲಸ ನಿರ್ವಹಿಸಿ

**■ವಿಜಯಸಾಕ್ಷಿ ಸುದ್ದಿ, ಗದಗ**

ರೋಣ ಪಟ್ಟಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಂದ ಉದ್ಘಾಟನೆಗೊಳ್ಳಲಿರುವ ವಿವಿಧ ಅಭಿವೃದ್ಧಿ ಕಾಮಗಾರಿಗಳ ಕಾರ್ಯಕ್ರಮವನ್ನು ಅಚ್ಚುಕಟ್ಟಾಗಿ ನಿರ್ವಹಿಸಬೇಕು ಎಂದು ಜಿಲ್ಲಾಧಿಕಾರಿ ಗೋವಿಂದರೆಡ್ಡಿ ಸೂಚಿಸಿದರು. ರೋಣ ತಾಲೂಕಿನ ತಹಸೀಲ್ದಾರ ಕಚೇರಿಯ ಕೋರ್ಟ್ ಹಾಲ್‌ನಲ್ಲಿ ಶುಕ್ರವಾರ ರೋಣ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಂದ ಡಿ.15ರಂದು ನೆರವೇರಲಿರುವ ವಿವಿಧ ಅಭಿವೃದ್ಧಿ ಕಾಮಗಾರಿಗಳ ಉದ್ಘಾಟನೆ ಮತ್ತು ಶಂಕುಸ್ಥಾಪನೆ ಕಾರ್ಯಕ್ರಮದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.



ವ್ಯವಸ್ಥಿತವಾಗಿ, ಯಾವುದೇ ಲೋಪಗಳಿಲ್ಲದಂತೆ ಕಾರ್ಯಕ್ರಮವನ್ನು ಆಯೋಜಿಸಲು ವಿವಿಧ ಸಮಿತಿಗಳನ್ನು ರಚಿಸಲಾಗಿದ್ದು, ಸಮಿತಿಯವರು ವಿಶೇಷ ಆಸಕ್ತಿಯಿಂದ ಕೆಲಸ ನಿರ್ವಹಿಸಬೇಕು. ಈಗಾಗಲೇ ಜಿಲ್ಲಾ ಹಾಗೂ ತಾಲೂಕು ಮಟ್ಟದ ಅಧಿಕಾರಿಗಳಿಗೆ ಕಾರ್ಯವನ್ನು ಹಂಚಿಕೆ ಮಾಡಲಾಗಿದೆ. ಅದರಲ್ಲಿ ಯಾವುದಾದರೂ ತೊಂದರೆ ಇದ್ದರೆ ಅದನ್ನು ಈಗಲೇ ತಿಳಿಸಿ ಪರಿಹಾರ ಕಂಡುಕೊಂಡು ಕಾರ್ಯಕ್ರಮವನ್ನು ಯಶಸ್ವಿಯಾಗಿ ನಿರ್ವಹಿಸಬೇಕು ಎಂದು ಹೇಳಿದರು.

ವಿವಿಧ ಇಲಾಖೆಗಳ ಯೋಜನೆಯ ಮಾಹಿತಿ ಒಳಗೊಂಡ ಸ್ಟಾಲ್‌ಗಳನ್ನು ತೆರೆದು ಯೋಜನೆಗಳ ಜಾಗೃತಿ ಪ್ರದರ್ಶಿಸಿ ಸರ್ಕಾರದಿಂದ ನೀಡಿರುವ ಸವಲತ್ತುಗಳ ಮಾಹಿತಿಯನ್ನು ಸಾರ್ವಜನಿಕರಿಗೆ ಒದಗಿಸಬೇಕು.

ಕಾರ್ಯಕ್ರಮಕ್ಕೆ ಆಗಮಿಸಲು ಪಿಡಬ್ಲ್ಯುಡಿಯವರು ರಸ್ತೆಗಳನ್ನು ಚೆನ್ನಾಗಿ ನಿರ್ವಹಣೆ ಮಾಡಿದ್ದಾರೆ. ಹಾಗೇ ವೇದಿಕೆ ನಿರ್ವಹಣೆ, ಹೆಲಿಪ್ಯಾಡ್ ನಿರ್ವಹಣೆ, ಅತಿಥಿಗಳನ್ನು ಸ್ವಾಗತಿಸುವ ಕಾರ್ಯ ಸರಿಯಾಗಿ ನಿರ್ವಹಣೆ ಆಗಬೇಕು ಎಂದರು.

> ವೇದಿಕೆಯಲ್ಲಿ ಎಲ್‌ಇಡಿ ಸ್ಕ್ರೀನ್, ಧ್ವನಿವರ್ಧಕಗಳ ಸ್ಥಿತಿಗತಿಯನ್ನು ಈಗಲೇ ಪರಿಶೀಲಿಸಿಕೊಳ್ಳಬೇಕು ಮತ್ತು ಸಾರ್ವಜನಿಕರಿಗೆ ಗೊಂದಲವಾಗದಂತೆ ಕ್ರಮ ವಹಿಸಬೇಕು. ಕಾರ್ಯಕ್ರಮಕ್ಕೆ ಆಗಮಿಸಿದ ಸಾರ್ವಜನಿಕರಿಗೆ ಉತ್ತಮ ಊಟದ ವ್ಯವಸ್ಥೆ ಆಗಬೇಕು. ಅದರಲ್ಲಿ ಮಹಿಳೆಯರಿಗೆ ಹಾಗೂ ಪುರುಷರಿಗೆ ಪ್ರತ್ಯೇಕ ಕೌಂಟರ್‌ಗಳನ್ನು ಮಾಡಿ ಯಾವುದೇ ರೀತಿಯ ಅವ್ಯವಸ್ಥೆ ಆಗದಂತೆ ನೋಡಿಕೊಳ್ಳಬೇಕು. ಅಧಿಕ ಸ್ಥಳಗಳಲ್ಲಿ ಕೈತೊಳೆಯುವ, ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಬೇಕು ಎಂದು ಜಿಲ್ಲಾಧಿಕಾರಿ ಗೋವಿಂದರೆಡ್ಡಿ ನಿಯೋಜಿತ ಅಧಿಕಾರಿಗಳಿಗೆ ಸೂಚಿಸಿದರು.

▸▸ 4ನೇ ಪುಟಕ್ಕೆ

### ರೋಣ ಮತಕ್ಷೇತ್ರದ ಅಭಿವೃದ್ಧಿ ಕಾರ್ಯ, ಅನುದಾನದ ವಿವರ ನೀಡಿದ ಶಾಸಕ ಜಿ.ಎಸ್. ಪಾಟೀಲ

# ಮುಖ್ಯಮಂತ್ರಿಗಳಿಂದ ಕಾಮಗಾರಿಗಳ ಉದ್ಘಾಟನೆ

**■ವಿಜಯಸಾಕ್ಷಿ ಸುದ್ದಿ, ರೋಣ**

ಡಿ.15ರಂದು ರೋಣ ಮತಕ್ಷೇತ್ರದ ಅಭಿವೃದ್ಧಿ ಕಾರ್ಯಕ್ರಮಗಳ ಶಂಕುಸ್ಥಾಪನೆ ಹಾಗೂ ವಿವಿಧ ಕಾಮಗಾರಿಗಳ ಉದ್ಘಾಟನಾ ಸಮಾರಂಭ ನೆರವೇರಲಿದ್ದು, ಈ ಸಮಾರಂಭಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯನವರು, ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ ಸೇರಿದಂತೆ ಅನೇಕ ಸಚಿವರು, ಶಾಸಕರು, ಲೋಕಸಭಾ ಸದಸ್ಯರು, ವಿಧಾನಪರಿಷತ್ ಸದಸ್ಯರು ಆಗಮಿಸಲಿದ್ದಾರೆ ಎಂದು ಕನಿಜ ನಿಗಮದ ಅಧ್ಯಕ್ಷರು ಹಾಗೂ ಶಾಸಕರಾದ ಜಿ.ಎಸ್. ಪಾಟೀಲ ಮಾಹಿತಿ ನೀಡಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆಯಲ್ಲಿ ಮಾಹಿತಿ ನೀಡಿರುವ ಅವರು, ಅಮೃತ ಯೋಜನೆಯಡಿ ರೋಣ, ಗಜೇಂದ್ರಗಡ, ನರೇಗಲ್ಲ ಪಟ್ಟಣಗಳಿಗೆ ಕುಡಿಯುವ ನೀರು ಯೋಜನೆ-6798 ಲಕ್ಷ ರೂ.ಗಳು,

ರೋಣ ಪಟ್ಟಣದಲ್ಲಿ ಜಿಟಿಟಿಸಿ ಕಾಲೇಜು ಕಟ್ಟಡ ನಿರ್ಮಾಣ-5000 ಲಕ್ಷ ರೂ.ಗಳು

ಮುನವಳ್ಳಿ ಕೋಟುಮಚಗಿ ರಾಹೆ-83ರ 95,90 ಕಿ.ಮೀಯಿಂದ 104.50 ಕಿಮೀ ಹಾಗೂ 107ರಿಂದ 110 ಕಿ.ಮೀವರೆಗೆ ರಸ್ತೆ ಸುಧಾರಣೆ -2000 ಲಕ್ಷ ರೂ.ಗಳು, ಜಕ್ಕಲಿ ಗ್ರಾಮದಲ್ಲಿ ದಿ. ಅಂದಾನಪ್ಪ ದೊಡ್ಡಮೇಟಿಯವರ ಸ್ಮಾರಕ ನಿರ್ಮಾಣ-995 ಲಕ್ಷ ರೂ.ಗಳು, ಗಜೇಂದ್ರಗಡ ತಾಲೂಕು ಪ್ರಜಾಸೌಧ ಕಟ್ಟಡ ನಿರ್ಮಾಣ-860 ಲಕ್ಷ ರೂ.ಗಳು, ರೋಣ



ಪಟ್ಟಣದಲ್ಲಿ ಮೆಟ್ರಿಕ್ ನಂತರದ ಬಾಲಕಿಯರ-ಬಾಲಕರ ವಸತಿ ನಿಲಯ ಕಟ್ಟಡ ಹಾಗೂ ಗಜೇಂದ್ರಗಡ ಮತ್ತು ನರೇಗಲ್ಲ ಪಟ್ಟಣಗಳಲ್ಲಿ 2 ವಸತಿ ನಿಲಯಗಳ ಪ್ರಾರಂಭೋತ್ಸವ -800 ಲಕ್ಷ ರೂ.ಗಳು, ಡಂಬಳ, ಪೇಠಾಲೂರ, ಜಂತ್ಲಿ ಶಿರೂರ ಗ್ರಾಮಗಳ ಕೆರೆ ಅಭಿವೃದ್ಧಿ ಹಾಗೂ ಸವಡಿ ಹೊನ್ನಾಪೂರ ಬ್ರಿಡ್ಜ್ ಕಂ ಬ್ಯಾರೆಜ್ ನಿರ್ಮಾಣ-650 ಲಕ್ಷ ರೂ.ಗಳು, ರೋಣ ಪಟ್ಟಣದಲ್ಲಿ ಪ್ರವಾಸಿ ಮಂದಿರ ಕಟ್ಟಡ-395 ಲಕ್ಷ ರೂ.ಗಳು, ರೋಣದಲ್ಲಿ ಸರ್ಕಾರಿ ಪದವಿಪೂರ್ವ ಕಾಲೇಜು ಕೊಠಡಿಗಳ ನಿರ್ಮಾಣ ಹಾಗೂ ಡಂಬಳ ಗ್ರಾಮದಲ್ಲಿ ಕಸ್ತೂರಬಾ ಗಾಂಧಿ ಬಾಲಿಕಾ ವಿದ್ಯಾಲಯ-287 ಲಕ್ಷ ರೂ.ಗಳು, ಡಂಬಳದಲ್ಲಿ ಮಲತ್ಯಾಜ್ಯ ಸಂಸ್ಕರಣಾ ಘಟಕ ನಿರ್ಮಾಣ-93,81 ಲಕ್ಷ ರೂ.ಗಳು, ಜಿಗಳೂರ ಕೆರೆ ಪಕ್ಕದಲ್ಲಿ ಪ್ರವಾಸಿ ಉದ್ಯಾನವನ-50 ಲಕ್ಷ ರೂಗಳ ವೆಚ್ಚದಲ್ಲಿ ನಿರ್ಮಾಣವಾಗಲಿವೆ ಎಂದು ತಿಳಿಸಿದ್ದಾರೆ.

> **ಉದ್ಘಾಟನೆಗೊಳ್ಳುವ ಕಾಮಗಾರಿಗಳು**
>
> ಮೇವುಂಡಿ ಗ್ರಾಮದಲ್ಲಿ ಮೊರಾರ್ಜಿ ದೇಸಾಯಿ ವಸತಿ ಶಾಲೆ ಉದ್ಘಾಟನೆ, ಗಜೇಂದ್ರಗಡದಲ್ಲಿ ವಸತಿ ನಿಲಯ ಮತ್ತು ರೋಣದಲ್ಲಿ ವಸತಿ ಶಾಲೆ ಪ್ರಾರಂಭೋತ್ಸವ-1000 ಲಕ್ಷ ರೂ.ಗಳು, ರೋಣ, ಗಜೇಂದ್ರಗಡ, ನರೇಗಲ್ಲ ಪಟ್ಟಣಗಳಲ್ಲಿ ಇಂದಿರಾ ಕ್ಯಾಂಟೀನ್ ಉದ್ಘಾಟನೆ-392.01 ಲಕ್ಷ ರೂ.ಗಳು, ಹಿರೇವಡ್ಡಟ್ಟಿ ಗ್ರಾಮದಲ್ಲಿ ಮೆಟ್ರಿಕ್ ಪೂರ್ವ ಬಾಲಕರ ವಸತಿ ನಿಲಯದ ಕಟ್ಟಡ-250 ಲಕ್ಷ ರೂ.ಗಳು, ಸವಡಿ ಗ್ರಾಮದ ಪ್ರಾಥಮಿಕ ಆರೋಗ್ಯ ಕೇಂದ್ರದ ಸಿಬ್ಬಂದಿ ವಸತಿ ಗೃಹ-91.75 ಲಕ್ಷ ರೂ.ಗಳು, ಅಬ್ಬಿಗೇರಿ ಗ್ರಾಮದ ಸಾರ್ವಜನಿಕ ಗ್ರಂಥಾಲಯ-27.00 ಲಕ್ಷ ರೂ.ಗಳ ವೆಚ್ಚದಲ್ಲಿ ನಿರ್ಮಾಣವಾಗಿ ಡಿ.15ರಂದು ಉದ್ಘಾಟನೆಗೊಳ್ಳಲಿವೆ.

## ಶಿವಗಣಾರಾಧನೆ



## ದಿ|| ಶ್ರೀ ಶಿದ್ದಪ್ಪ ಮೈಲಾರಪ್ಪ ಕುರಿ

ಸಾ|| ಕುರ್ತಕೋಟಿ, ತಾ|ಜಿ| ಗದಗ

ಇವರು ತಮ್ಮ 65ನೇ ವಯಸ್ಸಿನಲ್ಲಿ ದಿ.10-12-2024 ಮಂಗಳವಾರ ಮಧ್ಯಾಹ್ನ 12-15ಗಂಟೆಗೆ ಶಿವಾಧೀನರಾದರೆಂದು ತಿಳಿಸಲು ವಿಷಾಧಿಸುತ್ತೇವೆ. ಪ್ರಯುಕ್ತ ಮೃತರ ಶಿವಗಣಾರಾಧನೆಯನ್ನು ದಿನಾಂಕ: 14-12-2024ನೇ ಶನಿವಾರ ಮುಂಜಾನೆ 10-00ಕ್ಕೆ ಗದಗ ತಾಲೂಕಿನ ಕುರ್ತಕೋಟಿ ಗ್ರಾಮದ ನಮ್ಮ ಸ್ವ ಗೃಹದಲ್ಲಿ ನೆರವೇರಿಸಲಾಗುವುದು. ಕಾರಣ ತಾವುಗಳು ಆಗಮಿಸಿ ಮೃತರ ಆತ್ಮಕ್ಕೆ ಚಿರಶಾಂತಿ ಕೋರಬೇಕಾಗಿ ವಿನಂತಿ.

**ದುಃಖತಪ್ತರು**

ಸಹೋದರರು, ಸಹೋದರಿಯರು, ಸೊಸೆಯಂದಿರು, ಮೊಮ್ಮಕ್ಕಳು ಹಾಗೂ ಅಪಾರ ಬಂಧು-ಬಳಗ

## ಸಂಪಾದಕೀಯ

# ಶಾಲಾ ಶೈಕ್ಷಣಿಕ ಪ್ರವಾಸದ ವ್ಯಾಖ್ಯಾನ ಬದಲಾಗಲಿ

ಮೊನ್ನೆಯಷ್ಟೆ ಮುರುಡೇಶ್ವರದಲ್ಲಿ ನಾಲ್ವರು ವಿದ್ಯಾರ್ಥಿನಿಯರು ಸಮುದ್ರಪಾಲಾಗಿ ಜೀವ ಕಳೆದುಕೊಂಡ ಘಟನೆ ಇನ್ನು ಹಚ್ಚ ಹಸಿರಾಗಿದೆ. ಈ ಘಟನೆ ನಂತರ ರಾಜ್ಯದ ಎಲ್ಲ ಶಾಲೆ ಕಾಲೇಜುಗಳ ಶೈಕ್ಷಣಿಕ ಪ್ರವಾಸ ರದ್ದುಪಡಿಸಿ ಸರಕಾರ ಆದೇಶಿಸಿದೆ ಎನ್ನುವ ವದಂತಿ ಹರಿದಾಡಿತ್ತು. ಇದಕ್ಕೆ ಶಿಕ್ಷಣ ಇಲಾಖೆ ಸ್ಪಷ್ಟೀಕರಣ ನೀಡಿದ್ದು, ಯಾವುದೇ ಶಾಲೆ ಕಾಲೇಜುಗಳ ಶೈಕ್ಷಣಿಕ ಪ್ರವಾಸ ರದ್ದು ಮಾಡುವಂತೆ ಸೂಚನೆ ನೀಡಿಲ್ಲ ಎನ್ನುವದನ್ನು ತಿಳಿಸಿತು.

ಶಾಲಾ ಶಿಕ್ಷಣ ಇಲಾಖೆಯ ಈ ನಿರ್ಧಾರ ಸ್ವಾಗತಾರ್ಹ. ಯಾವುದೇ ದುರ್ಘಟನೆ ಕಾರಣಕ್ಕೆ ಇಡೀ ಶೈಕ್ಷಣಿಕ ಪ್ರವಾಸವನ್ನೆ ರದ್ದು ಮಾಡುವುದು ಸರಿಯಲ್ಲ. ಆದರೆ ಶೈಕ್ಷಣಿಕ ಪ್ರವಾಸದಲ್ಲಿ ಮಕ್ಕಳ ಸುರಕ್ಷತೆಗೆ ಗರಿಷ್ಠ ಆದ್ಯತೆ ನೀಡಬೇಕಾಗಿದೆ. ಅದಕ್ಕಾಗಿ ಒಂದಷ್ಟು ಕಠಿಣ ಕ್ರಮಗಳನ್ನು ಕೈಗೊಳ್ಳಬೇಕು. ಅಗತ್ಯವಿದ್ದರೆ ಪೊಲೀಸ್ ಇಲಾಖೆ ನೆರವು ಪಡೆದುಕೊಂಡರೂ ತಪ್ಪಿಲ್ಲ. ಒಟ್ಟಾರೆ ಮಕ್ಕಳ ರಕ್ಷಣೆ ಜೊತೆಗೆ ಪ್ರವಾಸ ನಡೆಯಬೇಕು. ಮಕ್ಕಳ ಜ್ಞಾನ ವಿಸ್ತಾರವಾಗಬೇಕು.

ಆದರೆ ಶಾಲೆ-ಕಾಲೇಜುಗಳಲ್ಲಿ ಆಯೋಜಿಸುತ್ತಿರುವ ಶೈಕ್ಷಣಿಕ ಪ್ರವಾಸ ನೋಡಿದರೆ ಅದು ಶೈಕ್ಷಣಿಕ ಪ್ರವಾಸವೊ, ಮೋಜು ಮಸ್ತಿಯ ಪ್ರವಾಸವೊ ಎನ್ನುವುದು ಅರ್ಥವಾಗುವುದಿಲ್ಲ. ಉತ್ತರ ಕರ್ನಾಟಕ ಭಾಗದ ಯಾವುದೇ ಶಾಲೆ-ಕಾಲೇಜುಗಳ ಪ್ರವಾಸದ ಪಟ್ಟಿ ಗಮನಿಸಿದರೆ ಅದೊಂದು ಧಾರ್ಮಿಕ ಪ್ರವಾಸದ ರೀತಿಯೆ ಇರುತ್ತದೆ. ವಿಶೇಷವಾಗಿ ದಕ್ಷಿಣ ಕರ್ನಾಟಕ ಭಾಗದ ಯಾತ್ರಾ ಸ್ಥಳಗಳ ದರ್ಶನವೇ ಶೈಕ್ಷಣಿಕ ಪ್ರವಾಸ ಎನ್ನುವಂತಾಗಿದೆ.

ಈ ಧಾರ್ಮಿಕ ಪ್ರವಾಸದ ಮಧ್ಯೆ ಮೈಸೂರು ಅರಮನೆ, ಮೃಗಾಲಯ, ಬೆಂಗಳೂರಿನ ವಿಜ್ಞಾನ ಕೇಂದ್ರ ಏನಾದರೂ ಇದ್ದರೆ ಅಲ್ಲೊಂದಿಷ್ಟು ಕಲಿಕೆಗೆ ಅವಕಾಶವಿರುತ್ತದೆ. ಅದನ್ನು ಬಿಟ್ಟರೆ ಇನ್ನುಳಿದ ಎಲ್ಲ ತಾಣಗಳು ಧಾರ್ಮಿಕ ಕೇಂದ್ರಗಳೆ ಆಗಿರುತ್ತವೆ. ಇನ್ನು ಊಟೋಪಚಾರದ ವಿಷಯದಲ್ಲೂ ಅದೇ ಧಾರ್ಮಿಕ ಕೇಂದ್ರಗಳನ್ನು ಗುರಿಯಾಗಿಟ್ಟುಕೊಂಡು ಪ್ರವಾಸ ಹೋಗುತ್ತಾರೆ. ಮಧ್ಯಾಹ್ನ ಇಂಥ ದೇವಸ್ಥಾನದಲ್ಲಿ ಪ್ರಸಾದ, ಸಂಜೆ ಈ ದೇವಸ್ಥಾನದಲ್ಲಿ ಊಟ ರೀತಿಯ ಪ್ರವಾಸದ ಯೋಜನೆ ಮಾಡಿಟ್ಟುಕೊಂಡು ಹೊರಡುತ್ತಾರೆ. ಇನ್ನು ಕಾಲೇಜ್ ಹಂತದಲ್ಲಾದರೆ ಫ್ಯಾಂಟಸಿ ಪಾರ್ಕ್, ಬೀಚ್‌ಗಳೆ ಅವರ ಪ್ರವಾಸಿ ತಾಣಗಳು.

ಪ್ರವಾಸ ಎಂದರೆ ಧಾರ್ಮಿಕ ಕೇಂದ್ರಗಳು, ಸಮುದ್ರ ತೀರವೇ ಆಗಬೇಕೆ? ಪಠ್ಯಾಧಾರಿತ ವಿಷಯಗಳನ್ನೆ ಆಧಾರವಾಗಿಟ್ಟುಕೊಂಡು ಐತಿಹಾಸಿಕ ತಾಣಗಳನ್ನು ಮಾತ್ರ ನೋಡಬೇಕೆ? ಮೋಜು ಮಸ್ತಿಗಾಗಿ ಬೀಚ್, ವಾಟರ್ ಪಾರ್ಕ್ ಗಳಿಗೆ ಭೇಟಿ ನೀಡಬೇಕೆ? ಯಾಕೆ ಚಿಕ್ಕ ವಯಸ್ಸಿನಲ್ಲಿ ದೊಡ್ಡ ಉದ್ಯಮ ಆರಂಭಿಸಿದ ಸಾಧಕರನ್ನು ಭೇಟಿ ಮಾಡುವುದೂ ಶೈಕ್ಷಣಿಕ ಪ್ರವಾಸ ಅಂತ ಪರಿಗಣಿಸಬಹುದಲ್ಲವೇ? ಚಿಕ್ಕ ಹಳ್ಳಿಯಾಗಿದ್ದರೂ ಹತ್ತಾರು ಜನ ಐಪಿಎಸ್ ಪರೀಕ್ಷೆ ಪಾಸು ಮಾಡಿದ ಹಳ್ಳಿಗಳಿಗೆ ಯಾಕೆ ಮಕ್ಕಳನ್ನು ಕರೆದುಕೊಂಡು ಹೋಗಬಾರದು? ಉನ್ನತ ಶಿಕ್ಷಣ ಪಡೆಯಲು ಪ್ರೇರಣೆ ನೀಡುವಂಥ ವಿಶ್ವವಿದ್ಯಾಲಯುಗಳಿಗೆ ಹೋಗುವುದು ಒಳಿತಲ್ಲವೇ. ಇಂಥ ತಾಣಗಳಿಗೆ ಹೋಗುವುದರಿಂದ ಮಕ್ಕಳ ಸುರಕ್ಷತೆ ಅಷ್ಟೊಂದು ಸವಾಲು ಆಗುವುದಿಲ್ಲ ಎನ್ನುವ ಕನಿಷ್ಠ ಪ್ರಜ್ಞೆ ನಮ್ಮ ಶಿಕ್ಷಕರಿಗೆ ಇಲ್ಲವಾಯಿತೆ ಎನ್ನುವ ಪ್ರಶ್ನೆ ಮೂಡುತ್ತದೆ.

ಮಕ್ಕಳನ್ನು ಪ್ರವಾಸಿ ತಾಣಗಳಿಗೆ ಕರೆದೊಯ್ಯುವುದಕ್ಕಿಂತ ಪ್ರೇರಣಾ ಸ್ಥಳಗಳಿಗೆ ಕರೆದೊಯ್ದರೆ ಶೈಕ್ಷಣಿಕ ಪ್ರವಾಸ ಸಾರ್ಥಕತೆ ತಂದುಕೊಡುತ್ತದೆ. ಹೀಗಾಗಿ ಶೈಕ್ಷಣಿಕ ಪ್ರವಾಸದ ವ್ಯಾಖ್ಯಾನ, ಅರ್ಥವನ್ನು ಮತ್ತಷ್ಟು ವಿಸ್ತರಿಸಿಕೊಂಡು ಅಳವಡಿಸಿಕೊಳ್ಳುವುದು ಒಳಿತು.

---

### ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆ, ಮಹಿಳಾ ಘಟಕದ ಸುವರ್ಣ ಮಹೋತ್ಸವ ವರ್ಷ

# ಮಹಿಳಾ ಘಟಕದ ಪದಾಧಿಕಾರಿಗಳ ಪರಿಚಯ



**ನಂದಾ ಚಂದ್ರು ಬಾಳಿಹಳ್ಳಿಮಠ :** ಬಾಲ್ಯದಿಂದಲೂ ಪ್ರತಿಭಾವಂತ ವಿದ್ಯಾರ್ಥಿನಿಯಾದ ಇವರು ಬಿ.ಎ. ಪದವೀಧರರು. ಕರ್ನಾಟಕ ವಿಶ್ವವಿದ್ಯಾಲಯದಲ್ಲಿ ಎಂಎ ಸ್ನಾತಕೋತ್ತರ ಪದವಿ ಓದುತ್ತಿರುವಾಗಲೇ ಗದಗ ನಗರದ ಗಣ್ಯ ವರ್ತಕರಾದ ಚಂದ್ರು ಬಾಳಿಹಳ್ಳಿಮಠ ಇವರನ್ನು ವಿವಾಹವಾಗಿ ಗದಗ ನಗರಕ್ಕೆ ಆಗಮಿಸಿದರು. ಇವರು ಸಂಗೀತ, ಓದು, ಬರವಣಿಗೆಯಲ್ಲಿ ಅಭಿರುಚಿಯುಳ್ಳವರು. 25 ವರ್ಷದಿಂದ ಅಕ್ಕನ ಬಳಗದ ಸದಸ್ಯರಾಗಿ, 2015-17ನೇ ಸಾಲಿಗೆ ಅಕ್ಕನ ಬಳಗದ ಕೋಶಾಧ್ಯಕ್ಷರಾಗಿ, 2019-21ನೇ ಸಾಲಿಗೆ ಅಕ್ಕನ ಬಳಗದ ಕಾರ್ಯದರ್ಶಿಯಾಗಿ ಸೇವೆಯನ್ನು ಸಲ್ಲಿಸಿದ್ದಾರೆ. ಸದಾ ಕ್ರಿಯಾಶೀಲರಾಗಿ ಚಟುವಟಿಕೆಯಿಂದ ಇರುವ ನಂದಾ ಅವರು. ಇದೀಗ ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ ಸುವರ್ಣ ಮಹೋತ್ಸವ ಸಂಭ್ರಮ ವರ್ಷದ 2024-2025ನೇ ಸಾಲಿಗೆ ಅಧ್ಯಕ್ಷರಾಗಿ ಆಯ್ಕೆಯಾಗಿದ್ದಾರೆ.



**ಪ್ರಭಾ ಎಸ್.ಗದಗ:** ಇವರು ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ ಮಹಿಳಾ ಘಟಕದ 2024-2025ನೇ ಸಾಲಿಗೆ ಪ್ರಥಮ ಉಪಾಧ್ಯಕ್ಷರಾಗಿ ಅವಿರೋಧವಾಗಿ ಆಯ್ಕೆಯಾಗಿದ್ದಾರೆ. ಇವರು ಬಿ.ಕಾಂ, ಎಲ್.ಎಲ್.ಬಿ. ವಿದ್ಯಾಭ್ಯಾಸ ಪೂರೈಸಿ ಗದಗ ನಗರದ ಶರಣು ವ್ಹಿ.ಗದಗ ಅವರೊಂದಿಗೆ ದಾಂಪತ್ಯ ಜೀವನಕ್ಕೆ ಕಾಲಿಟ್ಟರು. ಪ್ರಭಾ ಶರಣು ಗದಗರವರು ವೈಭವ ಅಗ್ರೋ ಸೀಡ್ಸನ ಮಾಲಿಕರಾಗಿದ್ದು, ಗದಗ ಎಕ್ಸಪೋರ್ಟ್‌ನ ನಿರ್ದೇಶಕರಾಗಿದ್ದಾರೆ. ಇವರು 2023-2024ನೇ ಸಾಲಿನಲ್ಲಿ ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ ಮಹಿಳಾ ಘಟಕದ ಸಹ ಗೌರವ ಕಾರ್ಯದರ್ಶಿಗಳಾಗಿ, ತೃತೀಯ ಉಪಾಧ್ಯಕ್ಷರಾಗಿ ಒಂದು ವರ್ಷ ಸೇವೆಯನ್ನು ಸಲ್ಲಿಸಿದ್ದಾರೆ.



**ಸುಷ್ಮಾ ಸೋಮನಾಥ ಜಾಲಿ:** ಇವರು ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ 2024-25ನೇ ಸಾಲಿಗೆ ಮಹಿಳಾ ಘಟಕದ ಉಪಾಧ್ಯಕ್ಷರಾಗಿ ಆಯ್ಕೆಯಾಗಿದ್ದಾರೆ.

ಇವರು ಮೂಲತಃ ಬಳ್ಳಾರಿ ಜಿಲ್ಲೆಯ ಹಂಪಸಾಗರದವರು. ಗದಗ ನಗರದ ಜಾಲಿ ಮನೆತನದ ಸೋಮನಾಥ ಜಾಲಿ ಇವರನ್ನು ವಿವಾಹವಾದರು. ಇವರು ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ ಮಹಿಳಾ ಘಟಕದ ಸದಸ್ಯರಾಗಿ, ಸಹ ಗೌರವ ಕಾರ್ಯದರ್ಶಿಗಳಾಗಿ ಸೇವೆಯನ್ನು ಸಲ್ಲಿಸುತ್ತಿದ್ದಾರೆ.

**ಸುಜಾತಾ ಶರಣಬಸಪ್ಪ ಗುಡಿಮನಿ:** ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ ಮಹಿಳಾ ಘಟಕದ 2024-2025ನೇ ಸಾಲಿನ ತೃತೀಯ ಉಪಾಧ್ಯಕ್ಷರಾಗಿ ಆಯ್ಕೆಯಾಗಿದ್ದಾರೆ. ಇವರು ಮೂಲತ ನರೇಗಲ್‌ದವರು. ತಮ್ಮ ಪ್ರಾಥಮಿಕ ಹಾಗೂ ಮಾಧ್ಯಮಿಕ ಶಿಕ್ಷಣವನ್ನು ಭೂಮರಡ್ಡಿ ಹೈಸ್ಕೂಲ್‌ದಲ್ಲಿ ಪೂರೈಸಿದ್ದಾರೆ.

ಗದಗ ನಗರದ ಪ್ರತಿಷ್ಠಿತ ಗುಡಿಮನಿ ಮನೆತನದ ಶರಣಬಸಪ್ಪ ಇವರೊಂದಿಗೆ ದಾಂಪತ್ಯ ಜೀವನಕ್ಕೆ ಕಾಲಿಟ್ಟರು. ತಮ್ಮ ಪತಿಯೊಂದಿಗೆ ವ್ಯಾಪಾರದಲ್ಲಿ ತಮ್ಮನ್ನು ತಾವು ತೊಡಗಿಸಿಕೊಂಡು ವಿಜಯನಿಧಿ ಅಗ್ರೋ ವೆಂಚರ್ ನಾಮೇಯನ್ನು ಹೊಂದಿರುತ್ತಾರೆ.

ಇವರು ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ ಮಹಿಳಾ ಘಟಕದ ಕೋಶಾಧ್ಯಕ್ಷರಾಗಿ ಸೇವೆ ಸಲ್ಲಿಸಿದ್ದಾರೆ.



**ಜ್ಯೋತಿ ರಾಮನಗೌಡ ದಾನಪ್ಪಗೌಡ್ರ:** ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ ಮಹಿಳಾ ಘಟಕದ 2024-25ನೇ ಸಾಲಿಗೆ ಪುನಃ ಗೌರವ ಕಾರ್ಯದರ್ಶಿಗಳಾಗಿ ಆಯ್ಕೆಯಾಗಿದ್ದಾರೆ. ಇವರು ಮೂಲತಃ ಧಾರವಾಡ ಜಿಲ್ಲೆಯ ನವಲಗುಂದ ತಾಲೂಕಿನ ಹಾಳಕುಸುಗಲ್ ಗ್ರಾಮದವರು. ತಮ್ಮ ಪ್ರಾಥಮಿಕ ಶಿಕ್ಷಣವನ್ನು ನವಲಗುಂದ ತಾಲೂಕಿನ ಹಾಳಕುಸುಗಲ್ ಗ್ರಾಮದಲ್ಲಿ ಪೂರೈಸಿ, ನಗರದ ಪ್ರತಿಷ್ಠಿತ ಕುಟುಂಬವಾದ ದಾನಪ್ಪಗೌಡ್ರ ಮನೇತದ ರಾಮನಗೌಡ ಭೀಮನಗೌಡ ದಾನಪ್ಪಗೌಡ್ರ ಇವರನ್ನು ಮದುವೆಯಾಗಿ ಶ್ರೀ ಅನ್ನಪೂರ್ಣೇಶ್ವರಿ ಮೆಡಿಕಲ್ ಏಜೆನ್ಸಿ ನಾಮೆಯಲ್ಲಿ ಪತಿಯೊಂದಿಗೆ ವ್ಯಾಪಾರದಲ್ಲಿ ಹಾಗೂ ಸಮಾಜಿಕವಾಗಿ ಕೂಡಾ ತಮ್ಮನ್ನು ತಾವು ತೊಡಗಿಸಿಕೊಂಡಿದ್ದಾರೆ. ಇವರು ಇನ್‌ರವ್ಹಿಲ್ ಕ್ಲಬ್ ಕೋಶಾಧ್ಯಕ್ಷರಾಗಿ, ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ ಆಜೀವ ಸದಸ್ಯರಾಗಿದ್ದಾರೆ. ಮಹಿಳಾ ಘಟಕದ ಕೋಶಾಧ್ಯಕ್ಷರಾಗಿ 2023-24ನೇ ಸಾಲಿಗೆ ಗೌರವ ಕಾರ್ಯದರ್ಶಿಗಳಾಗಿ ಸೇವೆಯನ್ನು ಸಲ್ಲಿಸಿದ್ದಾರೆ.



**ಲಲಿತಾ ಗುರುಬಸವಲಿಂಗ ತಡಸದ:** ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ ಮಹಿಳಾ ಘಟಕದ 2024-25ನೇ ಸಾಲಿಗೆ ಸಹ ಗೌರವ ಕಾರ್ಯದರ್ಶಿಗಳಾಗಿ ಆಯ್ಕೆಯಾಗಿದ್ದಾರೆ. ಮೂಲತಃ ಗುಲಬುರ್ಗಾ ಜಿಲ್ಲೆಯ ಶಾಪೂರದ ಪ್ರತಿಷ್ಠಿತ ಮನೆತನದಲ್ಲಿ ಜನಿಸಿದರು. ಗದಗ ನಗರದ ಬುರುಬಸವಲಿಂಗ ಇವರನ್ನು ಮದುವೆಯಾಗಿ ದಾಂಪತ್ಯ ಜೀವನಕ್ಕೆ ಕಾಲಿಟ್ಟರು. ಇವರು ದಾನೇಶ್ವರಿ ಎಂಟರಪ್ರೈಸಸ್ ನಾಮೆಯನ್ನು ಹೊಂದಿರುತ್ತಾರೆ. ಇವರು ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ ಮಹಿಳಾ ಘಟಕದ ಆಡಳಿತ ಮಂಡಳಿ ಸದಸ್ಯರಾಗಿದ್ದಾರೆ.

**ಸುಧಾ ಚನ್ನವೀರಪ್ಪ ಹುಣಸಿಕಟ್ಟಿ:** ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ ಮಹಿಳಾ ಘಟಕದ 2024-25ನೇ ಸಾಲಿಗೆ ಸಹ ಗೌರವ ಕಾರ್ಯದರ್ಶಿಗಳಾಗಿ ಆಯ್ಕೆಯಾಗಿದ್ದಾರೆ. ಗದಗ ಜಿಲ್ಲೆಯ ಬೆಳಹೊಂಡ ಗ್ರಾಮದಲ್ಲಿ ಜನಿಸಿ, ತಮ್ಮ ಬಾಲ್ಯ ಶಿಕ್ಷಣವನ್ನು ಬೆಳಹೊಂಡ ಗ್ರಾಮದಲ್ಲಿ ಮುಗಿಸಿ ಉನ್ನತ ಶಿಕ್ಷಣವನ್ನು ಗದುಗಿನ ವಿದ್ಯಾದಾನ ಹೆಣ್ಣುಮಕ್ಕಳ ಶಾಲೆಯಲ್ಲಿ ಪೂರೈಸಿ ಚನ್ನವಿರಪ್ಪ ಪ್ರಭಪ್ಪ ಹುಣಸಿಕಟ್ಟಿ ಇವರನ್ನು ವಿವಾಹವಾಗಿದ್ದು, ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ ಆಡಳಿತ ಮಂಡಳಿ ಸದಸ್ಯರಾಗಿ ಸೇವೆಯನ್ನು ಸಲ್ಲಿಸುತ್ತಿದ್ದಾರೆ.



**ಪೂರ್ಣಿಮಾ ಕೃಷ್ಣ ಆಟದ:** ಮೂಲತಃ ಬಾಗಲಕೋಟಿ ಜಿಲ್ಲೆಯ ಇಳಕಲ್ ತಾಲೂಕಿನ ರ‍್ಯಾವಣಕಿ ಮನೆತನದವರು. ಇವರು ತಮ್ಮ ಪ್ರಾಥಮಿಕ ಶಿಕ್ಷಣವನ್ನು ಗದಗ ನಗರದ ಸರ್ಕಾರಿ ಶಾಲೆ ನಂ. 6ರಲ್ಲಿ ಪೂರೈಸಿ, ಮುಂದೆ ಮಾಧ್ಯಮಿಕ ಶಿಕ್ಷಣವನ್ನು ಹುಬ್ಬಳ್ಳಿ ನಗರದ ಬಿ.ವ್ಹಿ.ಬಿ. ಸ್ಕೂಲ್‌ನಲ್ಲಿ ಪೂರೈಸಿ, ಪದವಿ ಶಿಕ್ಷಣವನ್ನು ಗದಗ ನಗರದ ರಡ್ಡಿ ಸಹಕಾರಿ ಕಾಲೇಜಿನಲ್ಲಿ ಕೃಷ್ಣ ಭೀಮಪ್ಪ ಆಟದ ಇವರೊಂದಿಗೆ ದಾಂಪತ್ಯ ಜೀವನಕ್ಕೆ ಕಾಲಿಟ್ಟರು. ಇವರು ಶ್ರೀ ದುರ್ಗಾ ಮಹಿಳಾ ಕೋ-ಆಪ್ ಕ್ರೆಡಿಟ್ ಮತ್ತು ವಿವಿಧೋದ್ದೇಶಗಳ ಸಂಘ ಹುಟ್ಟುಹಾಕಿದರು. ಇದರೊಂದಿಗೆ ಸಾಮಾಜಿಕವಾಗಿ ಕೂಡಾ ತಮ್ಮನ್ನು ತಾವು ತೊಡಗಿಸಿಕೊಂಡಿರುತ್ತಾರೆ. ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ ಮಹಿಳಾ ಘಟಕದ ಆಡಳಿತ ಮಂಡಳಿ ಸದಸ್ಯರು, ಕರ್ನಾಟಕ ಮಹಾ ಮಂಡಳಿ ಸದಸ್ಯರು ಬೆಂಗಳೂರು, ಕೆ.ಸಿ.ಸಿ. ಬ್ಯಾಂಕ ಸದಸ್ಯರಾಗಿ, ಎಂ.ಎಲ್.ಸಿ. ಬ್ಯಾಂಕ ಸದಸ್ಯರಾಗಿ, ಸೇವೆಯನ್ನು ಸಲ್ಲಿಸುತ್ತಿದ್ದಾರೆ.

---

### ಬಸವದಳದ ಶರಣ ಸಂಗಮ ಕಾರ್ಯಕ್ರಮದಲ್ಲಿ ಆರ್.ಎಲ್. ಕಳ್ಳಿಮನಿ

# ಸಮಾನತೆಯ ಹರಿಕಾರ ಅಂಬೇಡ್ಕರ್

■ ವಿಜಯಸಾಕ್ಷಿ ಸುದ್ದಿ, ಗದಗ

ಬ್ರಿಟಿಷರ ಆಳ್ವಿಕೆಯಲ್ಲಿದ್ದ ಭಾರತ ಲಕ್ಷಾಂತರ ಸ್ವಾತಂತ್ರ್ಯ ಹೋರಾಟಗಾರರ ತ್ಯಾಗ, ಬಲಿದಾನಗಳ ಮೂಲಕ ಸ್ವಾತಂತ್ರ್ಯವನ್ನೇನೋ ಗಳಿಸಿತು. ಆದರೆ ಸ್ವತಂತ್ರ ದೇಶವೆಂದು ಹರ್ಷಪಡುವ ಸ್ಥಿತಿಯಲ್ಲಿ ಅಂದು ದೇಶವಿರಲಿಲ್ಲ. ಕಾರಣ ಕ್ಯಾನ್ಸರ್ ಹುಣ್ಣಿನಂತೆ ವ್ಯಾಪಿಸಿದ್ದ ಜಾತೀಯತೆ, ಹಲವು ವರ್ಗದ ಜನರನ್ನು ನಾಯಿ, ನರಿಗಳಿಗಿಂತ ಕೀಳಾಗಿ ಕಾಣುವ ಅಸ್ಪೃಶ್ಯತೆ, ಮೇಲುಜಾತಿ-ಕೆಳ ಜಾತೀಯತೆಗಳು, ಜೊತೆಗೆ ಈ ದೇಶವನ್ನು ಕಾಡುತ್ತಿದ್ದ ಇನ್ನಿತರ ಜ್ವಲಂತ ಸಮಸ್ಯೆಗಳಿಗೆ ಸಮರ್ಥವಾದ ನೀತಿ ನಿರೂಪಣೆಯ ಸಂವಿಧಾನವನ್ನು ರೂಪಿಸಬೇಕಾಗಿತ್ತು. ಆಗ ಈ ದೇಶದ ಸಂವಿಧಾನ ರೂಪಿಸಲು ಸಮರ್ಥವಾಗಿ ಕಂಡ ವ್ಯಕ್ತಿಯೇ ಬಾಬಾಸಾಹೇಬ ಅಂಬೇಡ್ಕರರವರಾಗಿದ್ದರು. ಪರಿಣಾಮ ಅವರಿಗೆ ಸಂವಿಧಾನ ರೂಪಿಸುವ ಸಮಿತಿಯ ನೇತೃತ್ವ ನೀಡಲಾಯಿತು ಎಂದು ನವಲಗುಂದ ಸರಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ ಕಿರಿಯ ತರಬೇತಿ ಅಧಿಕಾರಿಗಳಾದ ಆರ್.ಎಲ್. ಕಳ್ಳಿಮನಿ ಹೇಳಿದರು. ಅವರು ಬಸವದಳದ 1623ನೇ ಶರಣ ಸಂಗಮ ಕಾರ್ಯಕ್ರಮದಲ್ಲಿ 'ನಮ್ಮ ಸಂವಿಧಾನ ಮತ್ತು ಅಂಬೇಡ್ಕರವರ 68ನೇ ಸ್ಮರಣೆ' ಕುರಿತು ಉಪನ್ಯಾಸ ಕಾರ್ಯಕ್ರಮದಲ್ಲಿ ಮಾತನಾಡುತ್ತಾ, ನಿಮ್ನ ವರ್ಗದಿಂದ ಬಾಬಾಸಾಹೇಬರು ತಮಗೆ ಸಿಕ್ಕ ಅವಕಾಶವನ್ನು ತುಂಬ ಸಮರ್ಥವಾಗಿ ಈ ದೇಶದ ಸರ್ವ ಸಮಸ್ಯೆಗಳಿಗೆ ತಾರಕವೆನ್ನುವಂತೆ ಸಂವಿಧಾನ ರೂಪಿಸಿದರು. ಅವರು ರೂಪಿಸಿದ ಸಂವಿಧಾನದಿಂದಲೇ ಈ ದೇಶದ ಬಹುತೇಕ ಅನಿಷ್ಠಗಳ ನಿವಾರಣೆಯಾಗಿದೆ. ಸರ್ವರಿಗೂ ಸಮನತೆಯ ಹಕ್ಕು ಸಿಕ್ಕಿದೆ. ಸಾವಿರಾರು ವರ್ಷಗಳಿಂದ ತುಳಿತಕ್ಕೆ ಒಳಗಾಗಿದ್ದ ಬಹುಜನರು ಸಮಾನತೆಯ ಸಂವಿಧಾನದ ಉಪಯೋಗ ಪಡೆದು ಈ ದೇಶದ ನಿರ್ಮಾಣ ಕಾರ್ಯದಲ್ಲಿ ತೊಡಗಿದ್ದಾರೆ ಎಂದರು.




ಮೃತ್ಯುಂಜಯ ಆರ್.ಜಿನಗಾ ಶರಣೆ ಬೊಂತಾದೇವಿ ಹಾಗೂ ಶರಣೆ ಕಾಳವ್ವೆಯವರ ವಚನಗಳನ್ನು ಅರ್ಥಗರ್ಭಿವಾಗಿ ಚಿಂತನೆ ನಡೆಸಿದರು. ಮುಖ್ಯ ಅತಿಥಿಗಳಾಗಿ ಪಾಲ್ಗೊಂಡಿದ್ದ ಶಿವಾನಂದ ನಗರದ ಸಾಮಾಜಿಕ ಚಿಂತಕರಾದ ಶರಣೆ ಪದ್ಮಾವತಿ ಕೆ.ಹಚಿಜಗಿ ಸಾಂದರ್ಭಿಕವಾಗಿ ಮಾತನಾಡಿದರು.

ಸಮಾರಂಭದ ಅಧ್ಯಕ್ಷತೆಯನ್ನು ವಿ.ಕೆ. ಕರಿಗೌಡ್ರ ವಹಿಸಿದ್ದರು. ವಚನ ಪ್ರಾರ್ಥನೆಯನ್ನು ರೇಣಕ್ಕ ಕರೀಗೌಡ್ರ ನಡೆಸಿದರು. ಎಸ್.ಎ. ಮುಗದ ಸ್ವಾಗತಿಸಿದರು. ಪ್ರಕಾಶ ಅಸುಂಡಿ ಕಾರ್ಯಕ್ರಮ ನಿರೂಪಿಸಿದರು. ಕಳಕಪ್ಪ ವ್ಯಾಪಾರಿ ಶರಣು ಸಮರ್ಪಣೆಗೈದರು.

---

### ಪಂಚಮಸಾಲಿ ಹೋರಾಟಗಾರರ ವಿರುದ್ಧ ಸಿದ್ಧರಾಮಯ್ಯ ಸರ್ಕಾರದಿಂದ ಲಾಠಿ ಪ್ರಹಾರ

# ಗದಗ-ಶಿರಹಟ್ಟಿ ರಸ್ತೆ ತಡೆದು ಪ್ರತಿಭಟನೆ



■ ವಿಜಯಸಾಕ್ಷಿ ಸುದ್ದಿ, ಗದಗ

ಪಂಚಮಸಾಲಿ ಸಮಾಜದ ಬಸವ ಜಯಮೃತ್ಯುಂಜಯ ಸ್ವಾಮಿಗಳು 2ಎ ಮೀಸಲಾತಿಗೆ ಆಗ್ರಹಿಸಿ ಬೆಳಗಾವಿಯ ಸುವರ್ಣ ಸೌಧದ ಎದುರಿಗೆ ಶಾಂತಿಯುತ ಪ್ರತಿಭಟನೆ ನಡೆಸುತ್ತಿದ್ದ ಸಂದರ್ಭದಲ್ಲಿ ಪಂಚಮಸಾಲಿಗರ ವಿರುದ್ಧ ಮುಖ್ಯಮಂತ್ರಿ ಸಿದ್ಧರಾಮಯ್ಯನವರು ಪೊಲೀಸರಿಂದ ಲಾಠಿ ಪ್ರಹಾರ ಮಾಡಿಸಿದ್ದಾರೆ. ಡಾ. ಬಿ.ಆರ್. ಅಂಬೇಡ್ಕರರ ಸಂವಿಧಾನದ ಭಾರತ ದೇಶದಲ್ಲಿ ನ್ಯಾಯ ಮತ್ತು ಪ್ರತಿಭಟನೆಯ ಹಕ್ಕು ಎಲ್ಲರಿಗೂ ಇದೆ. ಆದರೆ ಮುಖ್ಯಮಂತ್ರಿ ಸಿದ್ಧರಾಮಯ್ಯನವರು ಹೋರಾಟಗಾರರ ಮನವಿಯನ್ನು ಸಹ ಪಡೆಯದೇ ಪಂಚಮಸಾಲಿ ಸಮುದಾಯದ ಸ್ವಾಮೀಜಿಗಳನ್ನು, ಹೋರಾಟಗಾರರನ್ನು ಬಂಧಿಸಿ ಅವರ ಮೇಲೆ ಪ್ರಕರಣ ದಾಖಲಿಸಿರುವುದನ್ನು ಖಂಡಿಸಿ ಗುರುವಾರ ಸೊರಟೂರ ಗ್ರಾಮದಲ್ಲಿ ಪ್ರತಿಭಟನೆ ನಡೆಸಿದರು.

ಪಂಚಮಸಾಲಿ ಸಮಾಜದ ಹಿರಿಯ ಮುಖಂಡರಾದ ಭದ್ರೇಶ ಕುಸ್ಲಾಪೂರ ನೇತೃತ್ವದಲ್ಲಿ ಗದಗ -ಶಿರಹಟ್ಟಿ ಮುಖ್ಯ ರಸ್ತೆಯನ್ನು ಒಂದು ಗಂಟೆ ಕಾಲ ತಡೆದು, ಟೈರ್‌ಗೆ ಬೆಂಕಿ ಹಚ್ಚಿ ಗ್ರಾಮದ ಪಂಚಮಸಾಲಿ ಸಮಾಜದ ಮುಖಂಡರು, ಗುರು-ಹಿರಿಯರು, ಯುವಕರು ಸಿದ್ಧರಾಮಯ್ಯ ಸರ್ಕಾರ ವಿರುದ್ಧ ಘೋಷಣೆ ಕೂಗಿ, ಬಂಧಿಸಿರುವ ಎಲ್ಲರನ್ನೂ ಕೂಡಲೇ ಬಿಡುಗಡೆ ಮಾಡಬೇಕು. ಎಲ್ಲರ ಮೇಲೆ ಹಾಕಿರುವ ಕೇಸ್‌ಗಳನ್ನು ಹಿಂದಕ್ಕೆ ಪಡೆಯಬೇಕೆಂದು ಆಗ್ರಹಿಸಿದರು. ಮಲಕಾಜಪ್ಪ ಗಿಡ್ಡಕೆಂಚಣ್ಣವರ, ಪ್ರಕಾಶ ಕಲ್ಲಗುಡಿ, ಬಸವರಾಜ ಕನ್ಯಾಳ, ಪರಶುರಾಮ ಅಂಬಲಿ, ಮಲ್ಲಪ್ಪ ಫ.ಕಲಗುಡಿ, ಅಡಿವೆಪ್ಪ ಕನ್ನೂರ, ಬಸಪ್ಪ ಅಣ್ಣಿಗೇರಿ, ಈರಣ್ಣ ಬೋಳನವರ, ಮಲಕಾಜಪ್ಪ, ಶರಣಪ್ಪ ಹಳ್ಳಿ, ನಾಗರಾಜ ಜಾಮದಾರ, ಕಲ್ಲಪ್ಪ ಪಾಟೀಲ, ಯಲ್ಲಪ್ಪ ಹೂಗಾರ, ಪ್ರವೀಣ ಕನ್ನೂರ, ಚಂದು ಜಾಮದಾರ, ಈಶ್ವರಪ್ಪ ಕುಸ್ಲಾಪುರ, ಬಸಪ್ಪ ಛಬ್ಬಿ, ಈರಣ್ಣ ಕೊಟಗಿ ಸೇರಿದಂತೆ ಗ್ರಾಮದ ಮುಖಂಡರು, ಯುವಕರು, ಪ್ರತಿಭಟನೆಯಲ್ಲಿ ಭಾಗವಹಿಸಿ ಆಕ್ರೋಶ ವ್ಯಕ್ತಪಡಿಸಿದ್ದರು.

---

### ಯುವ ಸಬಲೀಕರಣ, ಕ್ರೀಡಾ ಇಲಾಖೆಯ ವತಿಯಿಂದ ಪ್ರೋತ್ಸಾಹಧನ

# ಕ್ರೀಡಾಪಟುಗಳಿಂದ ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

2024-25ನೇ ಸಾಲಿನಲ್ಲಿ ಪರಿಶಿಷ್ಟ ಜಾತಿ ಉಪಯೋಜನೆ ಹಾಗೂ ಪರಿಶಿಷ್ಟ ಪಂಗಡ ಉಪಯೋಜನೆಯಡಿಯಲ್ಲಿ 2023ನೇ ಕ್ಯಾಲೆಂಡರ್ ವರ್ಷದಲ್ಲಿ (01-01-2023ರಿಂದ 31-12-2023) ಅಂತಾರಾಷ್ಟ್ರೀಯ, ರಾಷ್ಟ್ರೀಯ ಮತ್ತು ರಾಜ್ಯ ಮಟ್ಟದ ಅಧಿಕೃತ ಕ್ರೀಡಾಕೂಟಗಳಲ್ಲಿ ಪದಕ ವಿಜೇತರಾದ ಪರಿಶಿಷ್ಟ ಜಾತಿ ಮತ್ತು ಪಂಗಡದ ಕ್ರೀಡಾಪಟುಗಳಿಗೆ ಪ್ರೋತ್ಸಾಹಧನ ನೀಡುವ ಕಾರ್ಯಕ್ರವನ್ನು ಅನುಷ್ಠಾನಗೊಳಿಸಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಆಸಕ್ತ ಕ್ರೀಡಾಪಟುಗಳು ಪ್ರಸ್ತಾವನೆಯನ್ನು ಡಿಸೆಂಬರ್ 20ರೊಳಗಾಗಿ ಈ ಕೆಳಕಂಡಂತೆ ಅರ್ಜಿಗಳನ್ನು ಕಚೇರಿಗೆ ಸಲ್ಲಿಸಬಹುದಾಗಿದೆ.

ಕ್ರೀಡಾಪಟುಗಳು ಪರಿಶಿಷ್ಟ ಜಾತಿ ಅಥವಾ ಪರಿಶಿಷ್ಟ ಪಂಗಡಕ್ಕೆ ಸೇರಿದವರಾಗಿರಬೇಕು. ಜಾತಿ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಲಗತ್ತಿಸಿರಬೇಕು. ಪ್ರೋತ್ಸಾಹಧನವನ್ನು ಕರ್ನಾಟಕದ ಕ್ರೀಡಾಪಟುಗಳಿಗೆ ಮಾತ್ರ ನೀಡುವುದು. ಅಂತಾರಾಷ್ಟ್ರೀಯ/ರಾಷ್ಟ್ರೀಯ/ರಾಜ್ಯ ಮಟ್ಟದ ತಂಡಗಳನ್ನು ಪ್ರತಿನಿಧಿಸಿ ಸರ್ಕಾರದಿಂದ ಅಂಗೀಕೃತವಾದ ಕ್ರೀಡಾಕೂಟಗಳಲ್ಲಿ ಭಾಗವಹಿಸಿ ಪದಕ ವಿಜೇತರಾಗಿರಬೇಕು. ಕ್ರೀಡಾಪಟಗಳು ಕರ್ನಾಟಕ ಮೂಲದವರಾಗಿದ್ದು, ಬೇರೆ ರಾಜ್ಯ ಅಥವಾ ಕ್ರೀಡಾ ತಂಡವನ್ನು ಪ್ರತಿನಿಧಿಸುವ ಕ್ರೀಡಾಪಟುಗಳು ಈ ಪುರಸ್ಕಾರಕ್ಕೆ ಅರ್ಹರಾಗಿರುವುದಿಲ್ಲ. ಸರ್ಕಾರಿ, ಅರೆಸರ್ಕಾರಿ ಇಲಾಖೆಗಳಲ್ಲಿ ನೇಮಕಗೊಂಡು ಸೇವೆ ಸಲ್ಲಿಸುತ್ತಿರುವವರು ಅಂತಾರಾಷ್ಟ್ರೀಯ ಕ್ರೀಡಾಕೂಟಗಳಲ್ಲಿ ಭಾಗವಹಿಸಿ ಹಾಗೂ ಪದಕ ಪಡೆದವರು ಮಾತ್ರ ಅರ್ಜಿ ಸಲ್ಲಿಸಲು ಅರ್ಹರಾಗಿರುತ್ತಾರೆ. ಉಳಿದ ಕ್ರೀಡಾಕೂಟಗಳಲ್ಲಿ ಭಾಗವಹಿಸಿ ಪದಕ ಪಡೆದಿರುವವರು ಅರ್ಹರಿರುವುದಿಲ್ಲ. ಕ್ರೀಡಾಪಟುಗಳು ಆಧಾರ್ ಕಾರ್ಡ್, ಪಡಿತರ ಚೀಟಿ ಹಾಗೂ ಆರ್.ಡಿ. ಸಂಖ್ಯೆಯನ್ನು ಒಳಗೊಂಡ ಜಾತಿ ಮತ್ತು ಆದಾಯ ಪ್ರಮಾಣಪತ್ರಗಳನ್ನು ಸಲ್ಲಿಸಬೇಕು.

ಓಲಂಪಿಕ್/ಏಷ್ಯನ್/ಕಾಮನ್‌ವೆಲ್ತ್ ಕ್ರೀಡೆಗಳಲ್ಲಿ ಅಂತಾರಾಷ್ಟ್ರಿಯ ಸಂಸ್ಥೆ ಮತ್ತು ಯುವ ವ್ಯಯಹಾರ ಮಂತ್ರಾಲಯದಿಂದ ಮಾನ್ಯತೆ ಪಡೆದ ಕ್ರೀಡಾ ಸಂಸ್ಥೆಗಳು ನಡೆಸುವ ಅಧಿಕೃತ ಚಾಂಪಿಯನ್‌ಶಿಪ್‌ಗಳಿಗೆ ಮಾತ್ರ ಪ್ರೋತ್ಸಾಹಧನ ನೀಡಲಾಗುವುದು. (ಮಾನ್ಯತೆ ಪಡೆಯದೇ ಇರುವ ಯಾವುದೇ ಫೆಡರೇಷನ್ ನಡೆಸುವ ಕ್ರೀಡೆಗಳಲ್ಲಿ ಭಾಗವಹಿಸುವ ಕ್ರೀಡಾಪಟುಗಳು ಪ್ರೋತ್ಸಾಹಧನಕ್ಕೆ ಅರ್ಹರಾಗಿರುವುದಿಲ್ಲ) 6ನೇ ತರಗತಿಯಿಂದ ವ್ಯಾಸಂಗ ಮಾಡುತ್ತಿರುವ ಕ್ರೀಡಾಪಟುಗಳು ಪ್ರೋತ್ಸಾಹಧನಕ್ಕೆ ಅರ್ಜಿ ಸಲ್ಲಿಸಲು ಅರ್ಹರಾಗಿರುತ್ತಾರೆ. ಅಂತಾರಾಷ್ಟ್ರೀಯ /ರಾಷ್ಟ್ರೀಯ ಮತ್ತು ರಾಜ್ಯ ಮಟ್ಟದ ಹಿರಿಯರ ಕ್ರೀಡಾಕೂಟದಲ್ಲಿ ಬಾಗವಹಿಸಿದ ಕ್ರೀಡಾಪಟುಗಳು ಪ್ರೋತ್ಸಾಹಧನಕ್ಕೆ ಅರ್ಹರಿರುವುದಿಲ್ಲ.

ಅರ್ಜಿ ನಮೂನೆಗಳು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಕಛೇರಿಯಲ್ಲಿ ಲಭ್ಯವಿದ್ದು, ಹೆಚ್ಚಿನ ಮಾಹಿತಿಗಾಗಿ ಸಹಾಯಕ ನಿರ್ದೇಶಕರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ-ಗದಗ ಇವರನ್ನು ಖುದ್ದಾಗಿ ಅಥವಾ ದೂರವಾಣಿ ಸಂಖ್ಯೆ 08372-238345ರ ಮೂಲಕ ಸಂಪರ್ಕಿಸಬಹುದಾಗಿದೆ.

ಬ್ಯಾಂಕ್ ಖಾತೆ ಕಡ್ಡಾಯವಾಗಿ ಕ್ರೀಡಾಪಟುವಿನ ಹೆಸರಿನಲ್ಲಿರಬೇಕು. ಬ್ಯಾಂಕ್ ಪಾಸ್ ಪುಸ್ತಕದ ಮುಖಪುಟದ ಜೆರಾಕ್ಸ ಪ್ರತಿ ಲಗತ್ತಿಸಬೇಕು (ಹೆಸರು, ಖಾತೆ ಸಂಖ್ಯೆ, ಐ.ಎಫ್.ಎಸ್.ಸಿ. ಕೋಡ್ ಇರುವ ಪುಟ) ಹಿಂದಿನ ಕ್ಯಾಲೆಂಡರ್ ವರ್ಷದ (01-01-2023ರಿಂದ 31-12-2023) ಕ್ರೀಡಾ ಸಾಧನೆಗೆ ಮಾತ್ರ ಪ್ರಸಕ್ತ ಸಾಲಿನ ಪ್ರೋತ್ಸಾಹಧನವನ್ನು ಪಾವತಿಸಲಾಗುವುದು. ಒಂದು ವರ್ಷದಲ್ಲಿ ಒಂದಕ್ಕಿಂತ ಹೆಚ್ಚಿನ ಯಾವುದೇ ಕ್ರೀಡಾಕೂಟಗಳಲ್ಲಿ ಭಾಗವಹಿಸಿ ಪದಕ ವಿಜೇತರಾದರೂ ಕೂಡ ಒಂದು ಅತ್ಯುತ್ತಮ ಸಾಧನಗಳಿಗೆ ಮಾತ್ರ ಪ್ರೋತ್ಸಾಹಧನವನ್ನು ಪಾವತಿಸಲಾಗುವುದು.

---




ಇತ್ತೀಚೆಗೆ ಬೆಳಗಾವಿಯಲಿಪ್ರತಿಭಟನೆಯಲ್ಲಿ ತೊಡಗಿದ್ದ ಪಂಚಮಸಾಲಿ ಸಮಾಜದವರ ಮೇಲೆ ಪೊಲೀಸರಿಂದ ಲಾಠಿ ಚಾರ್ಜ್ ಮಾಡಿಸಿದ ರಾಜ್ಯ ಸರಕಾರದ ವಿರುದ್ಧ ಶಿರಹಟ್ಟಿಯಲ್ಲಿ ಗುರುವಾರ ಪಂಚಮಸಾಲಿ ಸಮಾಜದ ವತಿಯಿಂದ ಪ್ರತಿಭಟನೆ ನಡೆಯಿತು. ಶಿರಹಟ್ಟಿ ಪಟ್ಟಣದ ಶ್ರೀ ಆಂಜನೇಯ ದೇವಸ್ಥಾನದಿಂದ ನೆಹರು ವೃತ್ತದವರೆಗೆ ಪಂಚಮಸಾಲಿ ಸಮಾಜದ ಮುಖಂಡರು ಪ್ರತಿಭಟನೆ ನಡೆಸಿ ಸರಕಾರಕ್ಕೆ ಧಿಕ್ಕಾರ ಕೂಗಿ ತಮ್ಮ ಆಕ್ರೋಶವನ್ನು ವ್ಯಕ್ತಪಡಿಸಿದರು.

---

# ಹುಡ್ಕೋ ನಿವೇಶನ ಫಲಾನುಭವಿಗಳ ಸಭೆ

■ ವಿಜಯಸಾಕ್ಷಿ ಸುದ್ದಿ, ಗದಗ

ಕಳಸಾಪೂರ ಹುಡ್ಕೋ ನಿವೇಶನ ಪಡೆದ ಫಲಾನುಭವಿಗಳ ಸಭೆಯನ್ನು ಡಿ15ರಂದು ಸಿದ್ಧಲಿಂಗ ನಗರ, 1ನೇ ಕ್ರಾಸ್, ಜಾಗೃತ ಆಂಜನೇಯ ಗುಡಿಯ ಹಿಂದಿರುವ ನಗರಸಭೆಯ ಉದ್ಯಾನವನದಲ್ಲಿ ಸಾಯಂಕಾಲ 5 ಗಂಟೆಗೆ ಕರೆಯಲಾಗಿದೆ.

ಈ ಸಭೆಯಲ್ಲಿ ಕಾರ್ಯಕಾರಿ ಸಮಿತಿ ರಚಿಸುವದು, ಬಡಾವಣೆಯ ಸೌಕರ್ಯಗಳ ಬಗ್ಗೆ ಚರ್ಚಿಸುವುದು, ಮುಂದಿನ ರೂಪುರೇಷಗಳ ಬಗ್ಗೆ ಚಿಂತನ-ಮಂಥನ, ಕಾರ್ಯಕ್ರಮವಿದ್ದು, ಕಳಸಾಪೂರ ಗ್ರಾಮದ ಹುಡ್ಕೋ ನಿವೇಶನ ಪಡೆದ ಎಲ್ಲ ಫಲಾನುಭವಿಗಳು ಹಾಜರಾಗಬೇಕೆಂದು ಡಾ. ಆರ್.ಎಚ್. ಕಬಾಡಿಯವರು ವಿನಂತಿಸಿದ್ದಾರೆ. ಹೆಚ್ಚಿನ ಮಾಹಿತಿಗಾಗಿ ಮೊ-9448905406ಗೆ ಸಂಪರ್ಕಿಸಬಹುದು ಎಂದು ತಿಳಿಸಿದ್ದಾರೆ.

## ಅತ್ಯಾಚಾರಿಗೆ ಗಲ್ಲು ಶಿಕ್ಷೆಗೆ ನೀಡಿ: ಐ.ಎಸ್. ಪೂಜಾರ



■ವಿಜಯಸಾಕ್ಷಿ ಸುದ್ದಿ, ಗದಗ

ಕಲಬುರಗಿ ಜಿಲ್ಲೆ ಯಡ್ರಾಮಿಯಲ್ಲಿ ಬಂಜಾರಾ ಸಮುದಾಯದ 11 ವರ್ಷದ ಅಪ್ರಾಪ್ತ ಶಾಲಾ ಬಾಲಕಿಯ ಮೇಲೆ ಅತ್ಯಾಚಾರವೆಸಗಿದ ಶಾಲಾ ಮುಖ್ಯಸ್ಥ ಹಾಜಿಮಲ್ಲಂಗ್ ಗಣಿಯಾರನಿಗೆ ವಿಶೇಷ ನ್ಯಾಯಾಲಯದ ಮೂಲಕ ಗಲ್ಲು ಶಿಕ್ಷೆ ನೀಡಬೇಕು. ಇಂತಹ ಹೇಯ ಕೃತ್ಯವನ್ನು ಶಾಲಾ ಮುಖ್ಯಸ್ಥನೇ ಎಸಗಿರುವುದು ಖಂಡನೀಯವಾಗಿದೆ ಎಂದು ಬಂಜಾರ ಸಮುದಾಯದ ಮುಖಂಡರಾದ ಐ.ಎಸ್. ಪೂಜಾರ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ಏನೂ ಅರಿಯದ ಮುಗ್ಧ ಬಾಲಕಿಯ ಮೇಲೆ ಅತ್ಯಾಚಾರ ಎಸಗಿರುವ ಶಾಲಾ ಶಿಕ್ಷಕನಿಗೆ ಗಲ್ಲು ಶಿಕ್ಷೆ ನೀಡಬೇಕು. ರಾಜ್ಯದಲ್ಲಿ ಮುಗ್ಧ ಬಾಲಕಿಯರ ಮತ್ತು ಮಹಿಳೆಯರ ಮೇಲೆ ಅತ್ಯಾಚಾರ ಎಸಗುವ ಅಪರಾಧಿಗಳಿಗೆ ಭಯ ಹುಟ್ಟುವಂತಹ ಕಠಿಣ ಕಾನೂನು ಜಾರಿಗೆ ತರಬೇಕು ಮತ್ತು ಆರು ತಿಂಗಳಲ್ಲಿ ಶಿಕ್ಷೆ ನೀಡುವ ವ್ಯವಸ್ಥೆ ಆಗಬೇಕು. ಈ ಪ್ರಕರಣದಿಂದ ಆಘಾತಗೊಂಡ ಬಾಲಕಿಗೆ ವೈದ್ಯಕೀಯ ಚಿಕಿತ್ಸೆ ನೀಡಬೇಕು. ಬಾಲಕಿಯ ಕುಟುಂಬಕ್ಕೆ ರಾಜ್ಯ ಸರ್ಕಾರ ಕೂಡಲೇ ಸೂಕ್ತ ಪರಿಹಾರ ನೀಡಬೇಕೆಂದು ಅವರು ಮುಖ್ಯಮಂತ್ರಿ ಮತ್ತು ಗೃಹ ಮಂತ್ರಿಗಳನ್ನು ಒತ್ತಾಯಿಸಿದ್ದಾರೆ.

### 'ಮಕ್ಕಳ ಆರೈಕೆಯಲ್ಲಿ ಆಯಾಗಳ ಪಾತ್ರ' ಕಾರ್ಯಾಗಾರದಲ್ಲಿ ಡಾ.ಶಿವನಗೌಡ್ರ

## ಮಗುವಿಗೆ ಮಾತೃ ವಾತ್ಸಲ್ಯ ನೀಡಿ

■ವಿಜಯಸಾಕ್ಷಿ ಸುದ್ದಿ, ಗದಗ

ನವಜಾತ ಮತ್ತು ವರ್ಷದೊಳಗಿನ ಮಕ್ಕಳನ್ನು ಪಾಲಕ-ಪೋಷಕರು, ಆಯಾಗಳು ಅತ್ಯಂತ ಜಾಗೃತಿಯಿಂದ ಆರೈಕೆ ಮಾಡುವ ಅಗತ್ಯವಿದೆ ಎಂದು ಗದುಗಿನ ಚಿಕ್ಕಮಕ್ಕಳ ತಜ್ಞ ಡಾ.ಶಿವನಗೌಡ ಜೋಳದರಾಶಿ ಹೇಳಿದರು.

ಅವರು ಬೆಟಗೇರಿಯ ಅಮೂಲ್ಯ ವಿಶೇಷ ದತ್ತು ಸ್ವೀಕಾರ ಸಂಸ್ಥೆಯಲ್ಲಿ ಗುರುವಾರ ದತ್ತು ಕೇಂದ್ರದಲ್ಲಿ ಮಕ್ಕಳ ಆರೈಕೆಯ ಸೇವೆಯಲ್ಲಿರುವ ಆಯಾಗಳಿಗೆ ಏರ್ಪಡಿಸಿದ್ದ 'ಬಾಲ ಮಕ್ಕಳ ಆರೈಕೆಯಲ್ಲಿ ಆಯಾಗಳ ಪಾತ್ರ' ಕಾರ್ಯಾಗಾರದಲ್ಲಿ ಮಾತನಾಡುತ್ತಿದ್ದರು.

ನವಜಾತ ಶಿಶುವಿಗೆ ಹುಟ್ಟಿದ ತಕ್ಷಣ ಮತ್ತು ಮೊದಲ 28 ದಿನಗಳವರೆಗೆ ಕೆಲವು ಆರೈಕೆಗಳು ಅತ್ಯಗತ್ಯವಾಗಿರುತ್ತವೆ. ವೈದ್ಯಕೀಯ ಅಧ್ಯಯನದ ಪ್ರಕಾರ, ಉಪಚಾರವಿಲ್ಲದೆ ವರ್ಷಗೊಳಗಿನ ಪ್ರತಿ 10 ಮಕ್ಕಳಲ್ಲಿ 5 ಮಕ್ಕಳು ಮೊದಲ 28 ದಿನ ತುಂಬುವುದರೊಳಗೆ ಮರಣ ಹೊಂದುತ್ತವೆ ಎಂದು ವಿವರಿಸಿದರು.

ಮಗುವನ್ನು ಬೆಚ್ಚಗಿಡುವದು, ಸ್ನಾನ ಮಾಡಿಸುವ, ಮಲಗಿಸುವ ವಿಧಾನವನ್ನು ವಿವರಿಸಿದರಲ್ಲದೆ, ಮಗುವಿಗೆ ಹಾಲು, ಗಂಜಿ ಕುಡಿಸುವ ಬಗೆ, ವರ್ಷದ ಮಗುವಿಗೆ ಆಹಾರ ನೀಡಬೇಕಾದ ವಿಧಾನ, ಅನಾರೋಗ್ಯದ ಸಂದರ್ಭದಲ್ಲಿ ಕೈಗೊಳ್ಳಬೇಕಾದ ಹಾಗೂ ವೈದ್ಯರ ಬಳಿ ಹೋಗುವಾಗ ಮಾಡಿಕೊಳ್ಳಬೇಕಾದ ಸಿದ್ಧತೆಗಳನ್ನು ವಿವರಿಸಿದರು.



ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ಕೇಂದ್ರದ ಅಧ್ಯಕ್ಷ ಮಲ್ಲಿಕಾರ್ಜುನ ಬೆಲ್ಲದ ಅವರು ಡಾ. ಶಿವನಗೌಡ ಜೋಳದರಾಶಿಯವರ ಸಾಮಾಜಿಕ ಕಳಕಳಿ ಹಾಗೂ ದತ್ತು ಕೇಂದ್ರದ ಹಾಗೂ ಮಕ್ಕಳ ಮೇಲಿರುವ ಕಾಳಜಿಯನ್ನು ಬಣ್ಣಿಸಿದರು.

ವೇದಿಕೆಯ ಮೇಲೆ ದತ್ತು ಕೇಂದ್ರದ ಮಾಜಿ ಅಧ್ಯಕ್ಷ ಮಂಜುನಾಥ ಚನ್ನಪ್ಪನವರ, ಡಾ. ಶ್ವೇತಾ ಪಾಟೀಲ, ಬಿ.ಬಿ. ಕೆಂಚರಡ್ಡಿ, ಶಾರದಮ್ಮ ಜೋಳದರಾಶಿ ಉಪಸ್ಥಿತರಿದ್ದರು. ಆಯಾಗಳಾದ ನೀಲವ್ವ ರೊಟ್ಟಿ, ಪಾರವ್ವ ಹಿರೇಮಠ, ಸರೋಜಾ ಕುಂದಗೋಳ, ಸುಂದರಾಬಾಯಿ ಅರವಟಗಿ, ಸುಶೀಲಾ ಬಡಿಗೇರ, ಸುವರ್ಣಾ ಬಾರಕೇರ, ಬಸವ್ವ ಶ್ಯಾವಿ ವೈದ್ಯರುಗಳಿಂದ ಹೆಚ್ಚಿನ ಮಾಹಿತಿಯನ್ನು ಪಡೆದುಕೊಂಡರು.

> ದತ್ತು ಕೇಂದ್ರದಲ್ಲಿ ಮಕ್ಕಳ ಆರೈಕೆಯ ಸೇವೆಯಲ್ಲಿರುವ ಆಯಾಗಳ ಪಾತ್ರ ಅತ್ಯಂತ ಜವಾಬ್ದಾರಿಯಿಂದ ಕೂಡಿರುತ್ತದೆ. ಆಯಾಗಳು ಮಗುವಿಗೆ ಮಾತೃ ವಾತ್ಸಲ್ಯ ನೀಡಬೇಕು. ಮಗುವಿನ ಹಸಿವು-ನಿದ್ರೆಗಳಿಗೆ ಸಕಾಲಕ್ಕೆ ವ್ಯವಸ್ಥೆ ಮಾಡಬೇಕು. ಪರಿತ್ಯಕ್ತ ಮಕ್ಕಳ ಸೇವೆಯಲ್ಲಿರುವ ಆಯಾಗಳ ಪಾತ್ರ ಹಿರಿದಾದದ್ದು ಮತ್ತು ಗೌರವಯುತವಾದದ್ದು. ತಾಯಿ ಇಲ್ಲದ ಮಕ್ಕಳಿಗೆ ಆಯಾಗಳು ನಿರ್ವಹಿಸುವ ತಾಯಿಯ ಪಾತ್ರ ನಿಜಕ್ಕೂ ಮನ ಮಿಡಿಯುವಂತದ್ದು ಎಂದು ಹೇಳಿದ ಡಾ.ಶಿವನಗೌಡ ಜೋಳದರಾಶಿ, ಅಮೂಲ್ಯ ವಿಶೇಷ ದತ್ತು ಸ್ವೀಕಾರ ಸಂಸ್ಥೆಯ ಕಾರ್ಯ ವೈಖರಿಯನ್ನು ಹಾಗೂ ಆಯಾಗಳ ಸೇವೆಯನ್ನು ಶ್ಲಾಘಿಸಿ, ಎಲ್ಲ ಆಯಾಗಳನ್ನು ಗೌರವಿಸಿದರು.

ನರಸಿಂಹ ಕಾಮಾರ್ತಿ ನಿರೂಪಿಸಿದರು. ಲಲಿತಾಬಾಯಿ ಮೇರವಾಡೆ ವಂದಿಸಿದರು. ಆಶಿಸ್ ತೋನ್ನಿವಾಲ, ಮಾಧುಸಾ ಮೇರವಾಡೆ, ಶಿವಾನಂದ ಮುಳಗುಂದ, ಸತೀಶ್ ರಾಹುತರ ಉಪಸ್ಥಿತರಿದ್ದರು.

## ಮೂಲಭೂತ ಸೌಲಭ್ಯ ಒದಗಿಸಲು ಮನವಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ವಾರ್ಡ್ ನಂ.23ರ ವ್ಯಾಪ್ತಿಗೆ ಬರುವ ಮಂಜಲಾಪೂರದಲ್ಲಿನ ಸಾರ್ವಜನಿಕರು ಕಳೆದ 30 ವರ್ಷಗಳಿಂದ ಮೂಲಭೂತ ಸೌಲಭ್ಯಗಳಿಲ್ಲದೆ ಪರಿತಪಿಸುತ್ತಿದ್ದು, ಕೂಡಲೇ ಅವರಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸುವಂತೆ ಆಗ್ರಹಿಸಿ ಕರ್ನಾಟಕ ರಕ್ಷಣಾ ವೇದಿಕೆ ಸ್ವಾಭಿಮಾನಿ ಸೇನೆಯ ತಾಲೂಕು ಘಟಕದ ವತಿಯಿಂದ ಶುಕ್ರವಾರ ಪುರಸಭೆ ಅಧ್ಯಕ್ಷೆ ಯಲ್ಲಮ್ಮ ದುರ್ಗಣ್ಣವರ ಮತ್ತು ಮುಖ್ಯಾಧಿಕಾರಿ ಮಹೇಶ ಹಡಪದ ಅವರಿಗೆ ಮನವಿ ಅರ್ಪಿಸಿದರು.




ಈ ಸಂದರ್ಭದಲ್ಲಿ ಮಾತನಾಡಿದ ಕರವೇ ಸ್ವಾಭಿಮಾನ ಸೇನೆಯ ತಾಲೂಕಾಧ್ಯಕ್ಷ ನಾಗೇಶ ಅಮರಾಪೂರ, ವಾರ್ಡ್ ನಂ.23ರ ಮಂಜಲಾಪೂರದಲ್ಲಿ ವಾಸಿಸುತ್ತಿರುವ ನಿವಾಸಿಗಳು ಸುಮಾರು 30 ವರ್ಷಗಳಿಂದ ಯಾವುದೇ ಮೂಲಭೂತ ಸೌಕರ್ಯಗಳಿಲ್ಲದೇ ನಿತ್ಯ ಪರದಾಡುತ್ತಿದ್ದಾರೆ. ಈ ಬಗ್ಗೆ ಪುರಸಭೆಗೆ ಅಲ್ಲಿನ ನಿವಾಸಿಗಳು ಹಲವಾರು ಬಾರಿ ಮನವಿ ಅರ್ಪಿಸಿದ್ದರೂ ಸಹ ಯಾವುದೇ ಕ್ರಮಗಳಾಗುತ್ತಿಲ್ಲ. ಇಲ್ಲಿ ಜನರಿಗೆ ಮುಖ್ಯವಾಗಿ ಶುದ್ಧ ಕುಡಿಯುವ ನೀರಿನ ಘಟಕ, ಮಹಿಳೆಯರಿಗೆ ಸುಲಭ ಶೌಚಾಲಯದ ವ್ಯವಸ್ಥೆ, ರಸ್ತೆ, ಚರಂಡಿ, ಸಾರ್ವಜನಿಕ ನೀರಿನ ವ್ಯವಸ್ಥೆ ಹಾಗೂ ಬೀದಿ ದೀಪಗಳ ನಿರ್ವಹಣೆ ಅವಶ್ಯವಾಗಿದೆ.

ಕೂಡಲೇ ಇಲ್ಲಿನ ನಿವಾಸಿಗಳಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸಿ ಅನುಕೂಲ ಮಾಡಿಕೊಡಬೇಕೆಂದು ವಿನಂತಿಸಿದರು. ಪುರಸಭೆ ಅಧ್ಯಕ್ಷೆ ಯಲ್ಲಮ್ಮ ದುರ್ಗಣ್ಣವರ ಮನವಿ ಸ್ವೀಕರಿಸಿ ಅಗತ್ಯ ಕ್ರಮಗಳನ್ನು ಕೈಗೊಳ್ಳುವ ಭರವಸೆ ನೀಡಿದರು.

ಈ ವೇಳೆ ಪುರಸಭೆ ಸದಸ್ಯರಾದ ರಾಜಣ್ಣ ಕುಂಬಿ, ವಿಜಯ ಕರಡಿ, ಎಸ್.ಕೆ. ಹವಾಲ್ದಾರ, ರಾಮಣ್ಣ ಗಡದವರ, ಕರವೇ ಸ್ವಾಭಿಮಾನಿ ಸೇನೆಯ ಜಿಲ್ಲಾ ಕಾರ್ಮಿಕ ಘಟಕ ಪ್ರ. ಕಾರ್ಯದರ್ಶಿ ಮೈನು ಮನಿಯಾರ, ಕೈಸರ ಮಹ್ಮದಅಲಿ, ಅಷ್ಪಾಕ ಬಾಗೋಡಿ, ಗೌಸ ಜಮಖಂಡಿ, ನವೀನ ಉಮಚಗಿ, ಮಹಮ್ಮದಅಲಿ ಶಿಗ್ಗಾಂವ, ಹಜರತ್ ಅಲಿ ಮನಿಯಾರ, ಇಲಿಯಾಸ ಮನಿಯಾರ, ನಿಹಾಲ್ ಕುದುರಿ, ಸುಲೇಮಾನ್ ಶಿರೂರ, ಅಷ್ಪಾಕ ಮನಿಯಾರ, ಇರ್ಫಾನ್ ಮನಿಯಾರ, ಖಾಲಿದ ಬಂಕಾಪುರ, ಗೌಸ ಯರಗಟ್ಟಿ, ಸಾದಿಕ್ ನೀರಲಗಿ ಮುಂತಾದವರಿದ್ದರು.

## ಭಾರತೀಯ ರೈಲ್ವೆಯೊಂದಿಗೆ ಕೊಂಕಣ್ ರೈಲ್ವೆ ವಿಲೀನಕ್ಕೆ ಸಹಮತವಿದೆ

■ವಿಜಯಸಾಕ್ಷಿ ಸುದ್ದಿ, ಬೆಳಗಾವಿ, ಸುವರ್ಣಸೌಧ

ಮಂಗಳೂರು-ಮುಂಬೈ ನಡುವೆ ನಿರ್ಮಿಸಿರುವ ಕೊಂಕಣ ರೈಲ್ವೆಯನ್ನು ಭಾರತೀಯ ರೈಲ್ವೆಯಲ್ಲಿ ವಿಲೀನಗೊಳಿಸಲು ರಾಜ್ಯ ಸರ್ಕಾರದ ಸಂಪೂರ್ಣ ಸಹಮತವಿದ್ದು, ಈ ನಿಟ್ಟಿನಲ್ಲಿ ಪತ್ರ ವ್ಯವಹಾರ ನಡೆಸಲಾಗಿದೆ ಎಂದು ಇಂಧನ ಸಚಿವ ಕೆ.ಜೆ. ಜಾರ್ಜ್ ಅವರು ಹೇಳಿದರು.

ಬೆಳಗಾವಿಯಲ್ಲಿ ನಡೆಯುತ್ತಿರುವ ಚಳಿಗಾಲದ ಅಧಿವೇಶನದಲ್ಲಿ ಗುರುವಾರ ವಿಧಾನಸಭೆಯ ಗಮನ ಸೆಳೆಯುವ ಸೂಚನೆಗಳಡಿ ಶಾಸಕರುಗಳಾದ ಕಿರಣ್ ಕುಮಾರ್ ಕೊಡ್ಗಿ ಮತ್ತು ವಿ. ಸುನೀಲ್‌ಕುಮಾರ್ ಅವರ ಗಮನ ಸೆಳೆಯುವ ಸೂಚನೆಗೆ ರಾಜ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಮೂಲ ಸೌಲಭ್ಯ ಅಭಿವೃದ್ಧಿ ಸಚಿವರ ಪರವಾಗಿ ಉತ್ತರ ನೀಡಿದ ಇಂಧನ ಸಚಿವ ಕೆ.ಜೆ. ಜಾರ್ಜ್ ಅವರು, ಕೊಂಕಣ ರೈಲ್ವೆ ಈ ಹಿಂದೆಯೇ ಭಾರತೀಯ ರೈಲ್ವೆಯೊಂದಿಗೆ ವಿಲೀನವಾಗಬೇಕಿತ್ತು. ಆದರೆ ನಷ್ಟದಲ್ಲಿ ನಡೆಯುತ್ತಿರುವ ಕಾರಣ, ಈ ಭಾಗದ ಯಾವುದೇ ರೈಲ್ವೆ ನಿಲ್ದಾಣಗಳು ಕೂಡ ಅಭಿವೃದ್ಧಿಯಾಗಲಿಲ್ಲ. ಕರ್ನಾಟಕದ ಪಾಲಿನ 270 ಕೋಟಿ ರೂ. ಗಳ ಶೇರು ಮೊತ್ತವನ್ನು ಯಾವ ರೀತಿ ಹೊಂದಾಣಿಕೆ ಮಾಡಬೇಕು ಎಂಬುದರ ಬಗ್ಗೆ ಈಗಾಗಲೆ ಪತ್ರ ವ್ಯವಹಾರ ನಡೆಸಲಾಗಿದೆ. ಭಾರತೀಯ ರೈಲ್ವೆಯೊಂದಿಗೆ ವಿಲೀನ ಆದಲ್ಲಿ, ಹೊಸ ರೈಲುಗಳು ಕೂಡ ಬರಲಿದ್ದು, ರೈಲು ನಿಲ್ದಾಣಗಳು ಕೂಡ ಸುಧಾರಣೆ ಕಾಣಲಿವೆ ಎಂದರು.



ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಪ್ರಿಯಾಂಕ್ ಖರ್ಗೆ ಮಾತನಾಡಿ, ವಿಲೀನ ಪ್ರಕ್ರಿಯೆ ಬಗ್ಗೆ ರಾಜ್ಯ ಸರ್ಕಾರ ಕೊಂಕಣ ರೈಲ್ವೆಗೆ ಪತ್ರ ವ್ಯವಹಾರ ಮಾಡಿದ್ದು, ಅವರಿಂದ ಉತ್ತರ ಬರುವ ನಿರೀಕ್ಷೆಯಲ್ಲಿದ್ದೇವೆ ಎಂದರು.

## ಲಾಠಿ ಚಾರ್ಜ್ ಖಂಡಿಸಿ ಮನವಿ

■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಡಿ.10ರಂದು ಬೆಳಗಾವಿಯ ವಿಧಾನಸೌಧದ ಮುಂಭಾಗದಲ್ಲಿ 2ಎ ಮೀಸಲಾತಿಗಾಗಿ ಆಗ್ರಹಿಸಿ ಪಂಚಮಸಾಲಿ ಸಮಾಜದ ಹೋರಾಟಗಾರರ ಮೇಲೆ ಪೊಲೀಸ್ ಅಧಿಕಾರಿಗಳು ಲಾಠಿ ಚಾರ್ಜ್ ಮಾಡಿದ್ದು ಖಂಡನಿಯ. ಕೂಡಲೇ ಲಾಠಿ ಚಾರ್ಜ್ ಮಾಡಿದ ಪೊಲೀಸ್ ಅಧಿಕಾರಿಗಳನ್ನು ಅಮಾನತುಗೊಳಿಸಬೇಕು ಎಂದು ಮುಳಗುಂದ ಬಿಜೆಪಿ ಮಾಹಾಶಕ್ತಿ ಘಟಕದ ವತಿಯಿಂದ ಪ.ಪಂ ಮುಖ್ಯಾಧಿಕಾರಿ ಮಂಜುನಾಥ ಗುಳೇದ ಅವರಿಗೆ ಮನವಿ ಸಲ್ಲಿಸಿದರು.



ಈ ಸಂದರ್ಭದಲ್ಲಿ ಬಿಜೆಪಿ ಮಾಹಾಶಕ್ತಿ ಕೇಂದ್ರದ ಅಧ್ಯಕ್ಷ ಮಾಹಾಂತೇಶ ಬಾತಾಖಾನಿ, ಸಿ.ಎಸ್. ಪತ್ರಿ, ಎಂ.ಪಿ. ಮಜ್ಜಿಗುಡ್ಡ, ಎಂ.ಎಸ್. ಬಳ್ಳಾರಿ, ಎಂ.ಡಿ. ನರಗುಂದ, ಶಿದ್ದರಾಮಯ್ಯ ಹಿರೇಮಠ, ಎ.ಎನ್. ಬಾತಾಖಾನಿ, ಕೆ.ಎನ್. ಬಾತಾಖಾನಿ, ಲಕ್ಷ್ಮಣ ಇಂಗಳಹಳ್ಳಿ, ಚಂದ್ರಪ್ಪ ಕಾಳೆ, ಮೋಹನ ಮದ್ದಿನ, ತಿಪ್ಪಣ್ಣ ಬಂಡಿ, ಮಲ್ಲಿಕಾರ್ಜುನ ಉಜ್ಜಣ್ಣವರ, ವೀರೇಶ ಅಕ್ಕಿ, ಸಿದ್ದು ಅಕ್ಕಿ, ಶರಣಪ್ಪ ಬಂಗಾರಿ ಇದ್ದರು.

## ಶ.ಸಾ.ಪ ಆಜೀವ ಸದಸ್ಯರ ಸಭೆ ನಾಳೆ

■ವಿಜಯಸಾಕ್ಷಿ ಸುದ್ದಿ, ಗದಗ

ಡಿ.15ರಂದು ಸಂಜೆ 4.30ಕ್ಕೆ ಜಗದ್ಗುರು ತೋಂಟದಾರ್ಯ ಮಠದ ಆವರಣದಲ್ಲಿರುವ ಜಿಲ್ಲಾ ಶರಣ ಸಾಹಿತ್ಯ ಪರಿಷತ್ತಿನ ಕಾರ್ಯಾಲಯದಲ್ಲಿ ಗದಗ ತಾಲೂಕಾ ಶರಣ ಸಾಹಿತ್ಯ ಪರಿಷತ್ತಿನ ಆಜೀವ ಸದಸ್ಯರ ಸಭೆಯನ್ನು ಕರೆಯಲಾಗಿದ್ದು, ಸಭೆಯ ಅಧ್ಯಕ್ಷತೆಯನ್ನು ಪ್ರಕಾಶ ಅಸುಂಡಿ ವಹಿಸುವರು.

ಈ ಸಭೆಯಲ್ಲಿ ಶರಣ ಸಾಹಿತ್ಯ ಪರಿಷತ್ತಿನ ಸಂಘಟನೆ, ಆಜೀವ ಸದಸ್ಯರ ಸಂಖ್ಯೆ ಹೆಚ್ಚಿಸುವದು ಮತ್ತು ಪರಿಷತ್ತಿಗೆ ದತ್ತಿಗಳನ್ನು ಹೆಚ್ಚಿಸುವುದು, ಪದಾಧಿಕಾರಿಗಳ ಆಯ್ಕೆ ಮುಂತಾದ ವಿಷಯಗಳ ಕುರಿತು ಚರ್ಚಿಸಲಾಗುವುದು. ಈ ಸಭೆಗೆ ಗದಗ ಜಿಲ್ಲಾ ಶರಣ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ಕೆ.ಎ. ಬಳಿಗಾರ ಮತ್ತು ಜಿಲ್ಲಾ ಕದಳಿ ಮಹಿಳಾ ವೇದಿಕೆ ಅಧ್ಯಕ್ಷರಾದ ಸುಧಾ ಹುಚ್ಚಣ್ಣವರ ಆಗಮಿಸುವರು.

ಪರಿಷತ್ತಿನ ಆಜೀವ ಸದಸ್ಯರು ಹಾಗೂ ಕದಳಿ ಮಹಿಳಾ ವೇದಿಕೆಯ ಎಲ್ಲ ಪದಾಧಿಕಾರಿಗಳು ಮತ್ತು ಶರಣ ಸಾಹಿತ್ಯಾಭಿಮಾನಿಗಳು, ಆಸಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಬಂದು ತಮ್ಮ ಸಲಹೆ-ಸೂಚನೆಗಳನ್ನು ನೀಡಬೇಕೆಂದು ಗದಗ ತಾಲೂಕ ಶರಣ ಸಾಹಿತ್ಯ ಪರಿಷತ್ತಿನ ಸದಸ್ಯರಾದ ಎಸ್.ಯು. ಸಜ್ಜನಶೆಟ್ಟ್ರ ಪ್ರಕಟಣೆ ಮೂಲಕ ತಿಳಿಸಿದ್ದಾರೆ.

## ಉದ್ಯೋಗ ನಗದು ಹಗರಣ | ಪಶ್ಚಿಮ ಬಂಗಾಳ ಮಾಜಿ ಸಚಿವ ಪಾರ್ಥ ಚಟರ್ಜಿಗೆ ಜಾಮೀನು

■ವಿಜಯಸಾಕ್ಷಿ ಸುದ್ದಿ, ನವದೆಹಲಿ

ಉದ್ಯೋಗಕ್ಕಾಗಿ ನಗದು ಹಗರಣಕ್ಕೆ ಸಂಬಂಧಿಸಿದ ಅಕ್ರಮ ಹಣ ವರ್ಗಾವಣೆ ಪ್ರಕರಣದಲ್ಲಿ ಪಶ್ಚಿಮ ಬಂಗಾಳದ ಮಾಜಿ ಸಚಿವ ಪಾರ್ಥ ಚಟರ್ಜಿಗೆ ಸುಪ್ರೀಂ ಕೋರ್ಟ್ ಶುಕ್ರವಾರ ಷರತ್ತುಬದ್ಧ ಜಾಮೀನು ನೀಡಿದೆ. ಬಿಡುಗಡೆಯಾದ ನಂತರ ಚಟರ್ಜಿ ಯಾವುದೇ ಸಾರ್ವಜನಿಕ ಹುದ್ದೆಯನ್ನು ಹೊಂದಿರಬಾರದು ಆದರೆ ಶಾಸಕರಾಗಿ ಮುಂದುವರಿಯಬಹುದು ಎಂದು ಸುಪ್ರೀಂಕೋರ್ಟ್ ಈ ವೇಳೆ ಹೇಳಿದೆ. ಉದ್ಯೋಗ ನಗದು ಹಗರಣ ನ್ಯಾಯಮೂರ್ತಿಗಳಾದ ಸೂರ್ಯ ಕಾಂತ್ ಮತ್ತು ಉಜ್ಜಲ್ ಭುಯಾನ್ ಅವರ ಪೀಠವು ಫೆಬ್ರವರಿ 1, 2025 ರಂದು ಚಟರ್ಜಿಯನ್ನು ಬಿಡುಗಡೆ ಮಾಡಲಾಗುವುದು ಎಂದು ಹೇಳಿದೆ. ಶಂಕಿತ ಆರೋಪಿಗಳನ್ನು ಅನಿರ್ದಿಷ್ಟಾವಧಿಯವರೆಗೆ ಬಂಧಿಸಲು ಸಾಧ್ಯವಿಲ್ಲ ಮತ್ತು ಆದ್ದರಿಂದ, ಆರೋಪಿ ಮತ್ತು ಸಂತ್ರಸ್ತರ ಹಕ್ಕುಗಳನ್ನು ಸಮತೋಲನಗೊಳಿಸಬೇಕು ಎಂದು ಪೀಠ ಈ ವೇಳೆ ಹೇಳಿದೆ. ಡಿಸೆಂಬರ್ 4 ರಂದು, ಸುಪ್ರೀಂ ಕೋರ್ಟ್ ಅವರ ಜಾಮೀನು ಅರ್ಜಿಯ ತೀರ್ಪನ್ನು ಕಾಯ್ದಿರಿಸಿತ್ತು ಮತ್ತು "ಮೇಲ್ನೋಟಕ್ಕೆ ನೀವು ಭ್ರಷ್ಟ ವ್ಯಕ್ತಿ. ನಿಮ್ಮ ನಿವೇಶನದಿಂದ ಕೋಟ್ಯಂತರ ರೂಪಾಯಿಗಳನ್ನು ವಶಪಡಿಸಿಕೊಳ್ಳಲಾಗಿದೆ" ಎಂದು ಹೇಳಿತ್ತು. ಏಪ್ರಿಲ್ 30ರ ಕಲ್ಕತ್ತಾ ಹೈಕೋರ್ಟ್ ಆದೇಶದ ವಿರುದ್ಧ ಚಟರ್ಜಿ ಸಲ್ಲಿಸಿದ ಮೇಲ್ಮನವಿಯ ಮೇಲೆ ಅಕ್ಟೋಬರ್‌ನಲ್ಲಿ ಸುಪ್ರೀಂ ಕೋರ್ಟ್ ಇಡಿಗೆ ನೋಟಿಸ್ ಜಾರಿ ಮಾಡಿತ್ತು. ಪಿಎಂಎಲ್‌ಎ ಅಡಿಯಲ್ಲಿ ಅವರ ವಿರುದ್ಧ ಪ್ರಾಥಮಿಕ ಪ್ರಕರಣವನ್ನು ದಾಖಲಿಸಲಾಗಿದೆ ಎಂಬ ಆಧಾರದ ಮೇಲೆ ಜಾಮೀನು ನಿರಾಕರಿಸಿತ್ತು. ಉದ್ಯೋಗ ನಗದು ಹಗರಣ ಪಶ್ಚಿಮ ಬಂಗಾಳದ ಸರ್ಕಾರಿ ಪ್ರಾಯೋಜಿತ ಮತ್ತು ಅನುದಾನಿತ ಪ್ರಾಥಮಿಕ ಶಾಲೆಗಳಲ್ಲಿ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳ ನೇಮಕಾತಿಯಲ್ಲಿನ ಅಕ್ರಮಗಳಿಗೆ ಸಂಬಂಧಿಸಿದಂತೆ ಚಟರ್ಜಿ ಅವರನ್ನು ಬಂಧಿಸಲಾಯಿತು. ಅಕ್ರಮ ನೇಮಕಾತಿಗಳಲ್ಲಿ ಹಣದ ಜಾಡು ಹಿಡಿದಿರುವ ತನಿಖೆಗೆ ಸಂಬಂಧಿಸಿದಂತೆ ಚಟರ್ಜಿ ಮತ್ತು ಅವರ ಆಪ್ತ ಸಹಾಯಕಿ ಅರ್ಪಿತಾ ಮುಖರ್ಜಿ ಅವರನ್ನು ಇಡಿ ಬಂಧಿಸಿದೆ. ಅರ್ಪಿತ ಮುಖರ್ಜಿಯವರ ಒಡೆತನದ ಫ್ಲಾಟ್‌ಗಳಿಂದ ಆಭರಣಗಳು, ಚಿನ್ನದ ಗಟ್ಟಿಗಳು, ಆಸ್ತಿಗಳ ದಾಖಲೆಗಳು ಮತ್ತು ಜಂಟಿ ಹೋಲ್ಡಿಂಗ್‌ನಲ್ಲಿರುವ ಕಂಪನಿಯೊಂದರ ಜೊತೆಗೆ 49.80 ಕೋಟಿ ರೂಪಾಯಿ ನಗದು ವಶಪಡಿಸಿಕೊಂಡಿರುವುದಾಗಿ ಇಡಿ ಹೇಳಿಕೊಂಡಿದೆ.

### ಕರ್ನಾಟಕ ವಿಧಾನಮಂಡಲದ ಎಸ್ಸಿ ಎಸ್ಟಿ ಕಲ್ಯಾಣ ಸಮಿತಿಯ

## ಮೊದಲನೇ ವರದಿ ಸರ್ಕಾರಕ್ಕೆ ಸಲ್ಲಿಕೆ: ಪಿ.ಎಂ.ನರೇಂದ್ರಸ್ವಾಮಿ

■ವಿಜಯಸಾಕ್ಷಿ ಸುದ್ದಿ, ಬೆಳಗಾವಿ, ಸುವರ್ಣಸೌಧ

ಕರ್ನಾಟಕ ವಿಧಾನಮಂಡಲದ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿಯ 2024-25ನೇ ಸಾಲಿನ ಮೊದಲನೇ ವರದಿಯನ್ನು ಡಿಸೆಂಬರ್ 12ರಂದು ವಿಧಾನಸಭೆ ಮತ್ತು ವಿಧಾನ ಪರಿಷತ್ ಎರಡೂ ಸದನಗಳಲ್ಲಿ ಮಂಡಿಸಿ ಸರ್ಕಾರಕ್ಕೆ ಸಲ್ಲಿಸಲಾಗಿದೆ ಎಂದು ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿಯ ಅಧ್ಯಕ್ಷರು ಆಗಿರುವ ವಿಧಾನಸಭೆ ಸದಸ್ಯರಾದ ಪಿ.ಎಂ. ನರೇಂದ್ರಸ್ವಾಮಿ ಅವರು ಹೇಳಿದರು.

ಸುವರ್ಣಸೌಧದ ಪಶ್ಚಿಮ ದ್ವಾರದ ಬಳಿ ಸಮಿತಿಯ ಸದಸ್ಯರೊಂದಿಗೆ ಶುಕ್ರವಾರ ಪತ್ರಿಕಾಗೋಷ್ಠಿ ನಡೆಸಿ ಅವರು ಈ ಮಾಹಿತಿ ನೀಡಿದರು.

ಸಮಿತಿಯು ಕಲಬುರಗಿ, ಯಾದಗಿರಿ, ಬೀದರ್, ಕೊಪ್ಪಳ, ರಾಯಚೂರು, ಬಳ್ಳಾರಿ, ವಿಜಯನಗರ, ದಾವಣಗೆರೆ, ಚಿತ್ರದುರ್ಗ, ಗದಗ, ಧಾರವಾಡ, ವಿಜಯಪುರ, ಬಾಗಲಕೋಟೆ ಹಾಗೂ ಬೆಳಗಾವಿ ಸೇರಿ ಒಟ್ಟು 14 ಜಿಲ್ಲೆಗಳಲ್ಲಿ ಅಧ್ಯಯನ ಪ್ರವಾಸ ಮಾಡಿ ಅನೇಕ ಲೋಪದೋಷಗಳನ್ನು ಪರಿಶೀಲಿಸಿದೆ. ಒಂದೇ ಮನೆಯ ಮಕ್ಕಳಂತೆ ಎಲ್ಲ ಪಕ್ಷದವರು ಒಗ್ಗೂಡಿ ಈ ವರದಿಯನ್ನು ಸಿದ್ಧಪಡಿಸಿದ್ದೇವೆ. ರಾಜ್ಯದ ಹಿತದೃಷ್ಟಿಯಿಂದ ಮತ್ತು ಎಸ್ಸಿ ಎಸ್ಟಿ ಸಮುದಾಯದ ಅಭಿವೃದ್ಧಿಗೆ ಹಾಗೂ ಅವರ ಭವಿಷ್ಯತ್ತನ್ನು ರೂಪಿಸುವುದಕ್ಕೆ ಸರ್ಕಾರದ ಯೋಜನೆಗಳು ಸಮರ್ಪಕವಾಗಿ ಅನುಷ್ಠಾನ ಆಗುವುದಕ್ಕೆ ಎಲ್ಲೆಲ್ಲಿ ಲೋಪಗಳಿದ್ದಾವೆ ಎಂಬುದನ್ನು ಪತ್ತೆ ಮಾಡಿ ಸಾಕಷ್ಟು ಶ್ರಮವಹಿಸಿ ಈ ವರದಿಯನ್ನು ತಯಾರಿ ಮಾಡಿದ್ದೇವೆ ಎಂದು ಅವರು ತಿಳಿಸಿದರು.

ಎಸ್‌ಸಿಎಸ್‌ಪಿ ಮತ್ತು ಟಿಎಸ್ಪಿ ಅನುದಾನವನ್ನು ಕಡ್ಡಾಯವಾಗಿ ಈ ಸಮುದಾಯವರಿಗೆ ಬಳಸಬೇಕು. ಹೊರಗುತ್ತಿಗೆಯಲ್ಲಿ ಮೀಸಲಾತಿಯನ್ನು ಕಡ್ಡಾಯ ಪಾಲಿಸಬೇಕು., ಎಲ್ಲಾ ಜಿಲ್ಲೆಗಳಲ್ಲಿ ಕಡ್ಡಾಯವಾಗಿ ಎಸ್ಸಿ ಮತ್ತು ಎಸ್ಟಿ ಸಮುದಾಯವರಿಗೆ 100 ದಿನಗಳ ಉದ್ಯೋಗ ಖಾತ್ರಿ ನೀಡಬೇಕು. ಸ್ಮಶಾನಭೂಮಿ ಇಲ್ಲದಿರುವ ಕಡೆಗಳಲ್ಲಿ ಕೂಡಲೇ ಒದಗಿಸಬೇಕು. ಭೂ ಒಡೆತನ ಯೋಜನೆಯಡಿ ಜಮೀನು ನೀಡಬೇಕು. ನಿವೇಶನ ವಸತಿ ರಹಿತರಿಗೆ ಕೂಡಲೇ ಸೌಕರ್ಯ ಒದಗಿಸಬೇಕು. ಪ್ರಾಧಿಕಾರಗಳಿಂದ ಬರುವ ಆದಾಯದಲ್ಲಿ ಎಸ್ಸಿ ಎಸ್ಟಿ ಹಾಸ್ಟೆಲ್ ಗಳಿಗೆ ಬೆಡ್, ಕಾಟ, ದಿಂಬು ಒದಗಿಸಬೇಕು., ಹೌಸಿಂಗ್ ಸೊಸೈಟಿಗಳ ಬಡಾವಣೆಗಳಲ್ಲಿ ಸೈಟ್‌ಗಳ ಮೀಸಲಾತಿ ನೀಡಬೇಕು ಎಂಬುದು ಸೇರಿದಂತೆ ನಾನಾ ವಿಷಯಗಳ ಬಗ್ಗೆ ಸಮಿತಿಯು ಪರಿಶೀಲಿಸಿ ವರದಿ ನೀಡಿದೆ ಎಂದು ಅವರು ತಿಳಿಸಿದರು.



ಸಮಿತಿಯ ಅಧ್ಯಕ್ಷರಾದ ತಾವು ಮತ್ತು ಸಮಿತಿಯ ಎಲ್ಲ ಸದಸ್ಯರು ಸೇರಿ ಹಲವಾರು ತನಿಖೆಗಳನ್ನು ನಡೆಸಿ, ಹಲವಾರು ಜಿಲ್ಲೆಗಳ ಪ್ರವಾಸ ನಡೆಸಿ ಹಲವಾರು ಇಲಾಖೆಗಳನ್ನು ವಿಮರ್ಶೆ ಮಾಡಿ ಅಲ್ಲಿರುವ ಕಾರ್ಯಕ್ರಮಗಳ ಅನುಷ್ಠಾನದಲ್ಲಿ ಆಗಿರುವ ಲೋಪ ಮತ್ತು ಎಸ್ಸಿ ಎಸ್ಟಿ ಕಾಯ್ದೆಯನ್ನು ಸದ್ಬಳಕೆ ಮಾಡುವ ಜವಾಬ್ದಾರಿಯನ್ನು ನಿರ್ವಹಿಸುವಲ್ಲಿ ಆಗಿರುವ ಲೋಪಗಳನ್ನು ಹಾಗೂ ವಿಶೇಷವಾಗಿ ಹಾಸ್ಟೆಲ್ ಮತ್ತು ವಸತಿ ಶಿಕ್ಷಣ ಸಂಸ್ಥೆಗಳಲ್ಲಿ ವಿದ್ಯಾರ್ಥಿಗಳಿಗೆ ದೊರಕಬೇಕಾದ ಸೌಲಭ್ಯಗಳಲ್ಲಿ ಆಗಿರುವಂತಹ ಕೊರತೆ ಬಗ್ಗೆ ಸಮಿತಿಯು ವಿಶೇಷವಾಗಿ ಈ ವರದಿಯನ್ನು ತಯಾರಿ ಮಾಡಿ ಹಲವಾರು ಮಾರ್ಪಾಟುಗಳನ್ನು ಸೂಚಿಸಿದೆ.

ಎಸ್ಸಿಪಿ ಟಿಎಸ್ಪಿ ಕಾಯ್ದೆಯಡಿ ಬರುವ ರೀತಿಯಲ್ಲಿ ಹೊರಗುತ್ತಿಗೆ ಮೀಸಲಾತಿ ಇರಬೇಕು, ಹೊರಗುತ್ತಿಗೆ ಸಿಬ್ಬಂದಿಗೆ ನೀಡುವ ವೇತನದ ಬಗ್ಗೆ ಜೊತೆಗೆ ಹಾಸ್ಟೇಲ್ ಮತ್ತು ವಸತಿ ಶಿಕ್ಷಣ ಸಂಸ್ಥೆಗಳಲ್ಲಿ ಮೂಲಭೂತ ಸೌಕರ್ಯಗಳ ಕೊರತೆ ಇರುವುದನ್ನು ಸಮಿತಿಯು ತೀಕ್ಷ್ಣವಾಗಿ ಪರಿಶೀಲನೆ ನಡೆಸಿ ಮಾರ್ಗೋಪಾಯ ಕಂಡು ಹಿಡಿದು ವರದಿಯಲ್ಲಿ ನೀಡಿದೆ.

ವಿಶೇಷವಾಗಿ ಉತ್ತರ ಕರ್ನಾಟಕ ಏಳೆಂಟು ಜಿಲ್ಲೆಗಳಲ್ಲಿ ಪ್ರವಾಸ ಮಾಡಿದಾಗ ಶೋಚನೀಯ ಅಂಶವೊಂದು ಸಮಿತಿಯ ಗಮನಕ್ಕೆ ಬಂದಿತು. ಮಾಜಿ ದೇವದಾಸಿಯರಿಗೆ ಪೂರ್ಣ ಪ್ರಮಾಣದಲ್ಲಿ ಪುನರ್ವಸತಿಯನ್ನು ಕಲ್ಪಿಸದೇ ಇರುವುದನ್ನು ಗಮನಿಸಿ ಈ ಬಗ್ಗೆ ತೀಕ್ಷ್ಣವಾಗಿ ಪ್ರತಿಕ್ರಿಯೆ ನೀಡಿ ಜಿಲ್ಲಾಡಳಿತ ಮತ್ತು ಸರ್ಕಾರಕ್ಕೆ ಸೂಕ್ತವಾದ ಮಾರ್ಗದರ್ಶನವನ್ನು ಮಾಡಿದ್ದೇವೆ. ಸಾವಿರಾರು ಜನ ಮಾಜಿ ದೇವದಾಸಿಯರು ವಸತಿ ಇಲ್ಲದೇ ನಿವೇಶನ ಇಲ್ಲದೇ ಹಳೆಯ ಪದ್ಧತಿಯಂತೆಯೇ ಬದುಕುತ್ತಿರುವುದರ ಬಗ್ಗೆ ನಾವು ವರದಿಯಲ್ಲಿ ಬೆಳಕು ಚೆಲ್ಲಿದ್ದೇವೆ. ಈ ಬಗ್ಗೆ ಸ್ಪಷ್ಟವಾದ ವಿಚಾರಗಳನ್ನು ಮತ್ತು ದತ್ತಾಂಶಗಳನ್ನು ಕ್ರೋಢೀಕರಿಸಿ ವರದಿಯಲ್ಲಿ ನೀಡಿದ್ದೇವೆ ಎಂದರು.

ಪತ್ರಿಕಾಗೋಷ್ಠಿಯಲ್ಲಿ ಸಮಿತಿಯ ಸದಸ್ಯರು ಮತ್ತು ಶಾಸಕರಾದ ದುರ್ಯೋದನ ಎಂ ಐಹೊಳೆ, ಕೃಷ್ಣ ನಾಯ್ಕ ಸೇರಿದಂತೆ ಇನ್ನಿತರ ಸದಸ್ಯರು ಇದ್ದರು.

> ವಸತಿ ಶಿಕ್ಷಣ ಸಂಸ್ಥೆಗಳಲ್ಲಿ ಉತ್ತಮ ಗುಣಮಟ್ಟವನ್ನು ಇನ್ನಷ್ಟು ಉನ್ನತೀಕರಿಸುವುದಕ್ಕೆ ಸಮಿತಿಯು ಸಲಹೆ ಮಾಡಿದೆ. ಖಾಸಗಿ ಶಿಕ್ಷಣ ಸಂಸ್ಥೆಗಳಲ್ಲಿನ ವ್ಯವಸ್ಥೆಗೂ ಮತ್ತು ಸರ್ಕಾರಿ ಶಿಕ್ಷಣ ಸಂಸ್ಥೆಗಳಲ್ಲಿನ ವ್ಯವಸ್ಥೆಗೂ ಅಂತರ ಇರಬಾರದು. ಈ ನಿಟ್ಟಿನಲ್ಲಿ ಇನ್ಮುಂದೆ ಕಂಪ್ಯೂಟರ್ ಶಿಕ್ಷಣ ಮತ್ತು ಪ್ರಾಥಮಿಕ ಶಿಕ್ಷಣದಲ್ಲಿ ಎಸ್‌ಡಿಎಂಸಿಗಳ ಭಾಗವಹಿಸುವಿಕೆಯ ಜೊತೆಗೆ ಸ್ಥಳೀಯ ಅನುದಾನವನ್ನು ಕ್ರೋಢೀಕರಿಸಿ ಟ್ಯಾಬ್ ಗಳನ್ನು ನೀಡುವುದು ಮತ್ತು ಸಿಎಸ್‌ಆರ್ ಅನುದಾನ ಲಭ್ಯತೆವಿರುವ ಕಡೆಗಳಲ್ಲಿ ಅದನ್ನು ಬಳಸಿಕೊಂಡು ಗ್ರಾಮೀಣ ಶಿಕ್ಷಣವನ್ನು ಮೇಲೆತ್ತಬೇಕು ಎಂದು ಸಮಿತಿಯು ಸಲಹೆ ಮಾಡಿದೆ ಎಂದರು.
>
> ಸಮಿತಿಯ ಸದಸ್ಯರು ಜಿಲ್ಲೆಗಳಿಗೆ ಭೇಟಿ ನೀಡಿದಂತಹ ಸಂದರ್ಭದಲ್ಲಿ ಪ್ರಾಥಮಿಕ ಶಿಕ್ಷಣದ ಬಗ್ಗೆ ಮಾಹಿತಿ ಪಡೆದಾಗ ಅಲ್ಲಿ ವಿದ್ಯಾಭ್ಯಾಸ ಮಾಡುವ ಒಟ್ಟು ಮಕ್ಕಳ ಪೈಕಿ ಶೇ.50ಕ್ಕಿಂತ ಹೆಚ್ಚು ಮಕ್ಕಳು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದವರಿದ್ದಾರೆಂಬ ಅಂಶ ತಿಳಿದು ಬಂದಿರುವುದರಿಂದ ಸೌಲಭ್ಯ ಕಲ್ಪಿಸುವುದರ ಬಗ್ಗೆ ಸಮಿತಿಯು ಕೆಲವು ಮಾರ್ಪಾಟುಗಳಿಗೆ ವರದಿಯಲ್ಲಿ ಅವಕಾಶ ಮಾಡಿದೆ ಎಂದು ತಿಳಿಸಿದರು.
>
> ಹೊರಗುತ್ತಿಗೆ ಆಧಾರದ

# ತಾತ್ಕಾಲಿಕ ಆಯ್ಕೆ ಪಟ್ಟಿ ಪ್ರಕಟ: ಆಕ್ಷೇಪಣೆಗೆ ಡಿ. 20 ಕೊನೆಯ ದಿನ

**■ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲಾ ಪಂಚಾಯತ್‌ನ ಸ್ವಚ್ಛ ಭಾರತ ಮಿಷನ್ (ಗ್ರಾ) ಯೋಜನೆಯಡಿಯಲ್ಲಿ ಜಿಲ್ಲಾ ಎಂಐಎಸ್ ಸಮಾಲೋಚಕರ ಖಾಲಿಯಿರುವ ಹುದ್ದೆಗೆ ಅರ್ಜಿಯನ್ನು ಆಹ್ವಾನಿಸಲಾಗಿತ್ತು. ವಿದ್ಯಾರ್ಹತೆ ಹಾಗೂ ಅನುಭವದ ಆಧಾರದ ಮೇಲೆ ನೇಮಕಾತಿಯಲ್ಲಿ ಸೂಚಿಸಿದ ವಿಧಾನಗಳ ಮೂಲಕ ಆಯ್ಕೆ ಮಾಡಿ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ತಿತಿತಿ.ರಚಿಜಚಿರ.ಟಿಛಿ.ಟಿ ವೆಬ್ ಸೈಟ್‌ನಲ್ಲಿ ಪ್ರಕಟಿಸಲಾಗಿದೆ.

ತಾತ್ಕಾಲಿಕ ಪಟ್ಟಿಗೆ ಆಕ್ಷೇಪಣೆ ಸಲ್ಲಿಸುವ ಅಭ್ಯರ್ಥಿಗಳು ಡಿಸೆಂಬರ್ 20 ರೊಳಗಾಗಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್ , ಗದಗ ಇವರ ಕಚೇರಿಗೆ ಲಿಖಿತ ರೂಪದಲ್ಲಿ ಖುದ್ದಾಗಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪರಿಶಿಷ್ಟ ಪಂಗಡದ ಯುವಕ/ ಯುವತಿಯರಿಗೆ ಡ್ರೋನ್ ತರಬೇತಿ

**■ವಿಜಯಸಾಕ್ಷಿ ಸುದ್ದಿ, ಗದಗ**

ಡ್ರೋನ್ ಆಧಾರಿತ ಫೋಟೋಗ್ರಫಿ ಮತ್ತು ವಿಡಿಯೋಗ್ರಫಿ ಮೂಲಕ ಸಾಮಾಜಿಕ ಜಾಲತಾಣಗಳಲ್ಲಿ ಉದ್ಯೋಗ ಪಡೆಯಲು ಪರಿಶಿಷ್ಟ ಪಂಗಡದ ಯುವಕ/ಯುವತಿಯರಿಗೆ ಕೆಲವೊಂದು ಷರತ್ತುಗಳಿಗೆ ಒಳಪಟ್ಟು ಡ್ರೋನ್ ತರಬೇತಿ ನೀಡಲಾಗುತ್ತದೆ.

ಪರಿಶಿಷ್ಟ ಪಂಗಡದ ಅಭ್ಯರ್ಥಿಗಳು ಸಹಾಯಕ ನಿರ್ದೇಶಕರು ಸಮಾಜ ಕಲ್ಯಾಣ ಇಲಾಖೆ ಗದಗ, ರೋಣ, ಶಿರಹಟ್ಟಿ, ನರಗುಂದ ಮತ್ತು ಮುಂಡರಗಿ ಇಲ್ಲಿ ಸಂಪರ್ಕಿಸಿ ಅರ್ಜಿಗಳನ್ನು ಪಡೆದು ಅಥವಾ ಉಪನಿರ್ದೇಶಕರು ಸಮಾಜ ಕಲ್ಯಾಣ ಇಲಾಖೆ ಗದಗ, ರವರ ಕಚೇರಿಯಲ್ಲಿ ಅರ್ಜಿಗಳನ್ನು ಪಡೆದು, ಭರ್ತಿ ಮಾಡಿ ಡಿಸೆಂಬರ್ 20 ರೊಳಗಾಗಿ ಸಲ್ಲಿಸಬಹುದಾಗಿದೆ ಎಂದು ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ಬೀರೇಶ್ವರ ಟ್ರಸ್ಟ್ ಕಮಿಟಿಯಿಂದ ಹಮ್ಮಿಕೊಂಡಿದ್ದ ಕಾರ್ತಿಕೋತ್ಸವ ಕಾರ್ಯಕ್ರಮದಲ್ಲಿ ಕಾಗಿನೆಲೆ ಶ್ರೀಗಳು**

# ಧರ್ಮ ಮಾರ್ಗದ ನಡೆಯಿಂದ ಮೋಕ್ಷ

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ದೀಪ ಮನುಕುಲದ ಅಜ್ಞಾನ ಮತ್ತು ಅಂಧಕಾರವನ್ನು ಹೋಗಲಾಡಿಸಿ ಧರ್ಮದ ಬೆಳಕಿನೆಡೆಗೊಯ್ದು ಸನ್ಮಾರ್ಗ ತೋರಿಸುವ ದಿವ್ಯ ಶಕ್ತಿಯಾಗಿದೆ. ಧಾರ್ಮಿಕ ಕಾರ್ಯಗಳು ಸಮಾಜದಲ್ಲಿ ಶಾಂತಿ-ನೆಮ್ಮದಿಯನ್ನು ನೆಲೆಸುವಂತೆ ಮಾಡುತ್ತವೆ ಎಂದು ಕಾಗಿನೆಲೆ ಕನಕಪೀಠದ ಶ್ರೀ ನಿರಂಜನಾನಂದಪುರಿ ಸ್ವಾಮಿಗಳು ಅಭಿಪ್ರಾಯಪಟ್ಟರು.



ಅವರು ಅವರು ಪಟ್ಟಣದ ಮ್ಯಾಗೇರಿ ಓಣಿಯ ಬೀರೇಶ್ವರ ಟ್ರಸ್ಟ್ ಕಮಿಟಿ ವತಿಯಿಂದ ಹಮ್ಮಿಕೊಳ್ಳಲಾಗಿದ್ದ 11ನೇ ವರ್ಷದ ಕಾರ್ತಿಕೋತ್ಸವ ಹಾಗೂ ವಿವಿಧ ಕಾರ್ಯಕ್ರಮಗಳ ದಿವ್ಯ ಸಾನ್ನಿಧ್ಯ ವಹಿಸಿ ಮಾತನಾಡುತ್ತಿದ್ದರು.

ಕತ್ತಲೆ ಎಂಬ ಅಜ್ಞಾನ ಕಳೆದು ಸುಜ್ಞಾನದ ಬೆಳಕು ಮೂಡಿಸುವುದು ಕಾರ್ತಿಕೋತ್ಸವದ ಉದ್ದೇಶವಾಗಿದೆ. ಈ ಜಗತ್ತಿನಲ್ಲಿ ಜನ್ಮತಾಳಿದ ಮೇಲೆ ನಮ್ಮನ್ನು ರಕ್ಷಣೆ ಮಾಡುವದು ನಮ್ಮ ಹಣ, ಸಂಪತ್ತು, ಜಾತಿ, ಸಮಾಜವಲ್ಲ. ನಮ್ಮನ್ನು ರಕ್ಷಣೆ ಮಾಡುವದು, ಮೋಕ್ಷದೆಡೆಗೆ ಕರೆದುಕೊಂಡು ಹೋಗುವದು ಭಗವಂತನ ನಾಮಸ್ಮರಣೆ, ಧರ್ಮ ಮಾರ್ಗದ ನಡೆಯಾಗಿದೆ. ಯುವಕರು ದುಶ್ಚಟಗಳಿಗೆ ಬಲಿಯಾಗದೆ, ಮೌಢ್ಯತೆಗಳಿಗೆ ಆದ್ಯತೆ ನೀಡದೆ, ಶಿಕ್ಷಣ ಕ್ರೀಡೆ, ಸಂಗೀತ, ಜಾನಪದ ಕಲೆಗಳನ್ನು ರೂಢಿಸಿಕೊಳ್ಳಬೇಕು ಎಂದು ನುಡಿದರು.

ಕಾರ್ಯಕ್ರಮ ಉದ್ಘಾಟಿಸಿದ ಮಾಜಿ ಶಾಸಕರಾದ ರಾಮಣ್ಣ ಲಮಾಣಿ ಹಾಗೂ ರಾಮಕೃಷ್ಣ ದೊಡ್ಡಮನಿ ಮಾತನಾಡಿ, ಸಮಾಜದಲ್ಲಿ ಧಾರ್ಮಿಕ ಚಟುವಟಿಕೆಗಳು ಹೆಚ್ಚು ಹೆಚ್ಚು ನಡೆಯುವಂತಾದರೆ ಅಲ್ಲಿ ಶಾಂತಿ, ನೆಮ್ಮದಿ ನೆಲೆಸಲು ಸಾಧ್ಯವಾಗುತ್ತದೆ. ಜಾಣರ ಸಮೂಹ ಸೃಷ್ಟಿಸಿದ ಅನುಭವಿಕ ಅದ್ಭುತ ಸಾಹಿತ್ಯವೇ ಜಾನಪದವಾಗಿದೆ. ಗ್ರಾಮೀಣ ಜನರ ಜಾನಪದ ಹಾಡು, ಒಗಟು, ಲಾವಣಿ, ಸೋಬಾನೆ ಹಾಡು, ಕುಟ್ಟುವ-ಬೀಸುವ ಪದ, ಹಂತಿ ಹಾಡು, ಡೊಳ್ಳಿನ ಹಾಡು, ಭಜನೆ ಹಾಡುಗಳಲ್ಲಿ ಜಾನಪದ ಸಾಹಿತ್ಯವೇ ತುಂಬಿಕೊಂಡಿದೆ. ಹಾಲುಮತ ಸಮಾಜದವರು ಜಾನಪದ ಸಾಹಿತ್ಯ ಕ್ಷೇತ್ರಕ್ಕೆ ಕೊಟ್ಟ ಕೊಡುಗೆ ಅಪಾರವಾಗಿದೆ. ಈ ಪರಂಪರೆಯನ್ನು ಯುವ ಸಮುದಾಯ ಮುಂದುವರೆಸಿಕೊಂಡು ಹೋಗಬೇಕು ಎಂದರು.

ಈ ಸಂದರ್ಭದಲ್ಲಿ ಬೀರೇಶ್ವರ ಟ್ರಸ್ಟ್ ಕಮಿಟಿ ಅಧ್ಯಕ್ಷ ನಾಗರಾಜ ಕೋರಿ, ಪುರಸಭೆ ಅಧ್ಯಕ್ಷೆ ಯಲ್ಲವ್ವ ದುರಗಣ್ಣವರ, ಪಿಎಸ್‌ಐ ನಾಗರಾಜ ಗಡದ, ಮುಖಂಡರಾದ ನಿಂಗಪ್ಪ ಬನ್ನಿ, ಶೇಕಣ್ಣ ಕಾಳೆ, ವೀರೇಂದ್ರ ಪಾಟೀಲ್, ನೀಲಪ್ಪ ಶೇರಸೂರಿ, ಗಂಗಪ್ಪ ದುರಗಣ್ಣವರ, ನೀಲಪ್ಪ ಪೂಜಾರ ಮಂಜುನಾಥ ಘಂಟಿ, ಭಾಗ್ಯಶ್ರೀ ಬಾಬಣ್ಣ, ಜಯಕ್ಕ ಕಳ್ಳಿ, ನಾಗರಾಜ ಮಡಿವಾಳರ, ಅಣ್ಣಪ್ಪ ರಾಮಗೇರಿ, ಮಂಜುನಾಥ. ಕೊಕ್ಕರಗುಂದಿ, ಶಿವಯೋಗಿ ಗಡ್ಡದೇವರಮಠ, ಯಲ್ಲಪ್ಪ ಸೂರಣಗಿ ಅಮರಪ್ಪ ಗುಡಗುಂಟಿ, ಮಲ್ಲಪ್ಪ ಗುಡಗುಂಟಿ, ಶಿದ್ದಪ್ಪ ಪೂಜಾರ, ಪುಟ್ಟಪ್ಪ ಕೋರಿ ಸೇರಿದಂತೆ ಅನೇಕರು ಇದ್ದರು.


ನ್ಯಾಯವಾದಿ ಮಹೇಶ ಹಾರೋಗೇರಿ ಉಪನ್ಯಾಸ ನೀಡಿದರು. ವಿ.ಜಿ. ಪಡಗೇರಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಈ ವೇಳೆ ಸಾಧಕರು ಹಾಗೂ ಪ್ರತಿಭಾವಂತರನ್ನು ಸನ್ಮಾನಿಸಲಾಯಿತು. ಕಾರ್ಯಕ್ರಮದ ಸಾನ್ನಿಧ್ಯವನ್ನು ಹುಲ್ಲೂರು ಅಮೋಘಿಮಠದ ಸಿದ್ದಯ್ಯ ಸ್ವಾಮಿಗಳು ವಹಿಸಿದ್ದರು.

ಇದಕ್ಕೂ ಮೊದಲು ಕಾಗಿನೆಲೆ ಶ್ರೀಗಳನ್ನು ಹಾವಳಿ ಆಂಜನೇಯ ದೇವಸ್ಥಾನದಿಂದ ಪೂರ್ಣ ಕುಂಬ ಹೊತ್ತ ಮುತ್ತೈದೆಯರು ಡೊಳ್ಳಿನ ವಾದ್ಯಗಳಿಂದ ಅದ್ದೂರಿ ಸ್ವಾಗತದೊಂದಿಗೆ ಬೀರೇಶ್ವರ ದೇವಸ್ಥಾನಕ್ಕೆ ಕರೆತರಲಾಯಿತು. ಕಾಗಿನೆಲೆ ಶ್ರೀಗಳು ಕಾರ್ತಿಕೋತ್ಸವಕ್ಕೆ ಚಾಲನೆ ನೀಡಿದರು. ಕಾರ್ಯಕ್ರಮ ನಂತರ ಕರ್ನಾಟಕ ಮೇಲೋಡಿಸ್ ಮುಂಡರಗಿ ಜನಪದ ರಸಮಂಜರಿ, ಹಾಗೂ ನಿನಗಿಂತ ನಾ ಬೇರಿ ಡೊಳ್ಳಿನ ಪದಗಳ ಕಾರ್ಯಕ್ರಮ ಜರುಗಿತು. ಈಶ್ವರ ಮೆಡ್ಲೇರಿ, ನಾಗರಾಜ ಶಿಗ್ಲಿ, ನೀಲಪ್ಪ ಪಡಗೇರಿ, ಮಲ್ಲೇಶ ಗೊಜಗೋಜಿ ಕಾರ್ಯಕ್ರಮ ನಿರ್ವಹಿಸಿದರು. ಕಾಗಿನೆಲೆ ಕನಕಪೀಠದ ಶ್ರೀ ನಿರಂಜನಾನಂದಪುರಿ ಸ್ವಾಮಿಗಳಿಗೆ ಸಮಾಜದ ವತಿಯಿಂದ ತುಲಾಭಾರ ಮಾಡಲಾಯಿತು.

**ಹಠಯೋಗಿ ಹರ್ಲಾಪೂರ ಕೊಟ್ಟೂರೇಶ್ವರ ಮಠದ ಆಶ್ರಯದಲ್ಲಿ ದೀಪೋತ್ಸವ, ಧಾರ್ಮಿಕ ಸಮಾರಂಭ**

# ಭಾವೈಕ್ಯತೆಯ 'ನಮ್ಮೂರ ಲಕ್ಷ ದೀಪೋತ್ಸವ'

**■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ**



150 ವರ್ಷಗಳ ಹಿಂದೆ ಜಾತಿ, ಮತ, ಅಜ್ಞಾನ, ಮೂಢನಂಬಿಕೆ, ಕಂದಾಚಾರಗಳ ಸುಳಿಯಲ್ಲಿ ಸಿಲುಕಿ ನಲುಗುತ್ತಿದ್ದ ಸಮಾಜದ ಕಣ್ತೆರೆಸಿ ಪ್ರೀತಿ, ವಾತ್ಸಲ್ಯ, ಮಾನವೀಯತೆಗಳನ್ನು ಬಿತ್ತಿ, ಅವರ ಹೃದಯದ ತೋಟವನ್ನು ನಳನಳಿಸುವಂತೆ ಮಾಡಿದ ಇಲ್ಲಿಯ ಸಮೀಪದ ಹರ್ಲಾಪುರ ಗ್ರಾಮದ ಹಠಯೋಗಿ ಸಾಧಕ ಕೊಟ್ಟೂರೇಶ್ವರ ಮಠದಲ್ಲಿ ಬಸವ ಪುರಾಣ ಮಹಾ ಮಂಗಲೋತ್ಸವ, ಧಾರ್ಮಿಕ ಸಮಾರಂಭ ಹಾಗೂ ಭಾವೈಕ್ಯತೆಯ 'ನಮ್ಮೂರ ಲಕ್ಷ ದೀಪೋತ್ಸವ' ಕಾರ್ಯಕ್ರಮವು ವಿಧಿ-ವಿಧಾನಗಳೊಂದಿಗೆ ಡಿ.14 ಮತ್ತು 15ರಂದು ಜರುಗಲಿದೆ.

ಡಿ.14ರಂದು ಬಸವ ಪುರಾಣ ಪ್ರವಚನದ ಮೂಲಕ ಹರ್ಲಾಪೂರ ಹಾಗೂ ಸುತ್ತಮುತ್ತಲಿನ ಗ್ರಾಮದ ಜನ ಮನ ಸೆಳೆದ ಬೀದರ ಜಿಲ್ಲೆಯ ಗಡಿಗೌಡಗಾಂವ ಹಾವಲಿಂಗೇಶ್ವರ ಸಂಸ್ಥಾನ ಹಿರೇಮಠದ ಶಾಂತವೀರ ಶಿವಾಚಾರ್ಯ ಮಹಾಸ್ವಾಮಿಗಳು ಪ್ರವಚನವನ್ನು ಮಂಗಲ ಮಾಡುವರು. ಪಾವನ ಸಾನ್ನಿಧ್ಯವನ್ನು ಕೊಪ್ಪಳದ ಗವಿಸಿದ್ದೇಶ್ವರ ಮಠದ ಗವಿಸಿದ್ದೇಶ್ವರ ಸ್ವಾಮಿಗಳು ವಹಿಸುವರು. ಹೊಸಳ್ಳಿಯ ಬೂದೀಶ್ವರ ಶ್ರೀಗಳು, ಚನ್ನವೀರ ಶ್ರೀಗಳು, ಕೊಟ್ಟೂರೇಶ್ವರ ಶಿವಾಚಾರ್ಯರು, ಗವಿಸಿದ್ಧಲಿಂಗ ಶಿವಾಚಾರ್ಯರು, ಶಿವಾನಂದ ಶ್ರೀಗಳು ನೇತೃತ್ವ ವಹಿಸಲಿದ್ದಾರೆ. ವೀರಯ್ಯ ತಾತನವರು ಹಿರೇಮಠ, ಶಿವಲಿಂಗಶಾಸ್ತ್ರಿಗಳು, ಶಂಕ್ರಯ್ಯ ಅಜ್ಜನವರು ಹಿರೇಮಠ, ಕೊಟ್ರಯ್ಯಶಾಸ್ತ್ರಿಗಳು ನರಗುಂದಮಠ, ಬೆಂಗಳೂರು ಮಿರಾಂಡ ಸಮೂಹ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಪ್ರೊ. ಎಸ್.ಎನ್. ಕಾತರಕಿ ಕೊಟ್ಟೂರೇಶ್ವರ ಶ್ರೀಗಳು ರಚಿಸಿದ 'ವಚನಕಾರರ ದೃಷ್ಟಿಯಲ್ಲಿ ಸಮಾನತೆ ಮತ್ತು ವೈಚಾರಿಕತೆ' ಗ್ರಂಥವನ್ನು ಬಿಡುಗಡೆ ಮಾಡುವರು.

ಬಿ.ಜೆ.ಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜೇಯೆಂದ್ರ, ಮಾಜಿ ಮುಖ್ಯಮಂತ್ರಿ, ಸಂಸದ ಬಸವರಾಜ ಬೊಮ್ಮಾಯಿ, ಮಾಜಿ ಸಚಿವ ಬಿ.ಶ್ರೀರಾಮುಲು, ಶಾಸಕ ಸಿ.ಸಿ. ಪಾಟೀಲ, ವಿ.ಪ ಸದಸ್ಯ ಎಸ್.ವಿ. ಸಂಕನೂರು, ಮಾಜಿ ಸಚಿವ ಕೆ.ಜಿ. ಬಂಡಿ, ರಾಜು ಕುರಡಗಿ, ರವಿ ದಂಡಿನ, ಶಿವಕುಮಾರಗೌಡ ಪಾಟೀಲ, ಮುತ್ತಣ್ಣ ಕಡಗದ, ಅಶೋಕ ಬ್ಯಾಹಟ್ಟಿ ಸೇರಿದಂತೆ ಹರ, ಗುರು, ಚರ ಮೂರ್ತಿಗಳು ಭಾಗವಹಿಸಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

ಡಿ.15ರಂದು ಬೆಳಿಗ್ಗೆ 6ಕ್ಕೆ ಕೊಟ್ಟೂರೇಶ್ವರ ಕರ್ತೃ ಗದ್ದುಗೆಗೆ ಮಹಾರುದ್ರಾಭಿಷೇಕ, ಲಕ್ಷ ಬಿಲ್ವಾರ್ಚನೆ ಪೂಜೆ, ಮಹಾಪ್ರಸಾದ, ಸಂಜೆ 4ಕ್ಕೆ ಪೂರ್ಣ ಕುಂಭದೊಂದಿಗೆ ಕೊಟ್ಟೂರೇಶ್ವರ ಹಾಗೂ ಬಸವೇಶ್ವರ ಭಾವಚಿತ್ರ ಮೆರವಣಿಗೆ ಜರುಗಲಿದೆ. ನಂತರ ಶ್ರೀಮಠದ ಆಶ್ರಯದಲ್ಲಿ ಗ್ರಾಮದ ಪ್ರತಿ ದೇವಸ್ಥಾನ, ಮಠ, ಮಸೀದಿಗಳಲ್ಲಿ ನಮ್ಮೂರ ಲಕ್ಷ ದೀಪೋತ್ಸವ ಜರುಗಲಿದೆ. ಗ್ರಾಮದ ಪ್ರತಿಯೊಂದು ಮನೆಯ ಭಕ್ತರು ಧರ್ಮ, ಜಾತಿ, ಮತ, ಪಂಥ ತೊರೆದು ದೀಪದಿಂದ ದೀಪ ಹಚ್ಚುವ ಧಾರ್ಮಿಕ ಕಾರ್ಯದಲ್ಲಿ ಭಾಗಿಗಳಾಗಲಿದ್ದಾರೆ.

ರಾತ್ರಿ 9ಕ್ಕೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಕಾರದೊಂದಿಗೆ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಲಿವೆ.

**ಸಿಎಂ ಸಿದ್ದರಾಮಯ್ಯ ಅವರಿಂದ ರೋಣ ಮತಕ್ಷೇತ್ರದಲ್ಲಿ ವಿವಿಧ ಕಾಮಗಾರಿಗಳಿಗೆ ಶಂಕುಸ್ಥಾಪನೆ**

# ಹಲವು ಕಾಮಗಾರಿಗಳಿಗೆ ನಾಳೆ ಚಾಲನೆ

**■ವಿಜಯಸಾಕ್ಷಿ ಸುದ್ದಿ, ಗದಗ**



ಜಿಲ್ಲೆಯ ರೋಣ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ 19689.87 ಲಕ್ಷ ರೂ.ವೆಚ್ಚದಲ್ಲಿ 16 ಕಾಮಗಾರಿಗಳಿಗೆ (11 ಶಂಕುಸ್ಥಾಪನೆ ಕಾಮಗಾರಿಗಳು ಮತ್ತು 5 ಉದ್ಘಾಟನೆ ಕಾಮಗಾರಿಗಳು) ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಡಿ.15ರಂದು ಚಾಲನೆ ನೀಡಲಿದ್ದಾರೆ.

ಶಂಕುಸ್ಥಾಪನೆ ಕಾಮಗಾರಿಗಳ ವಿವರ: ನಗರಾಭಿವೃದ್ಧಿ ಇಲಾಖೆಯ ಅಮೃತ ಯೋಜನೆಯಡಿ ಅಂದಾಜು ಮೊತ್ತ 6798 ಲಕ್ಷ ರೂ. ವೆಚ್ಚದಡಿ ರೋಣ, ಗಜೇಂದ್ರಗಡ ಮತ್ತು ನರೇಗಲ್ಲ ಪಟ್ಟಣಗಳಿಗೆ ಕುಡಿಯುವ ನೀರು ಯೋಜನೆ, ಕೌಶಲ್ಯಾಭಿವೃದ್ಧಿ ಇಲಾಖೆಯಿಂದ 5,000 ಲಕ್ಷ ರೂ. ವೆಚ್ಚದಡಿ ರೋಣ ಪಟ್ಟಣದಲ್ಲಿ ಜಿ.ಟಿ.ಟಿ.ಸಿ. ಕಾಲೇಜು ಕಟ್ಟಡ ನಿರ್ಮಾಣ, ಲೋಕೋಪಯೋಗಿ ಇಲಾಖೆಯಿಂದ 2,000 ಲಕ್ಷ ರೂ. ವೆಚ್ಚದಡಿ ಮುನವಳ್ಳಿ-ಕೋಟುಮಚಗಿ ರಾ.ಹೆ. 83 95.90 ಕಿ.ಮೀದಿಂದ 104.50 ಕಿ.ಮೀ ಹಾಗೂ 107.00ರಿಂದ 110.00ರವರೆಗೆ ರಸ್ತೆ ಸುಧಾರಣೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ 995.00 ಲಕ್ಷ ರೂ. ವೆಚ್ಚದಡಿ ಜಕ್ಕಲಿ ಗ್ರಾಮದಲ್ಲಿ ಶ್ರೀ ಅಂದಾನಪ್ಪ ದೊಡ್ಡಮೇಟಿಯವರ ಸ್ಮಾರಕ ನಿರ್ಮಾಣ, ಕಂದಾಯ ಇಲಾಖೆಯಿಂದ 860 ಲಕ್ಷ ರೂ. ವೆಚ್ಚದಡಿ ಗಜೇಂದ್ರಗಡ ತಾಲೂಕು ಪ್ರಜಾ ಸೌಧ ಕಟ್ಟಡ ನಿರ್ಮಾಣ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ 800 ಲಕ್ಷ ರೂ. ವೆಚ್ಚದಡಿ ರೋಣ ಪಟ್ಟಣದಲ್ಲಿ ಮೆಟ್ರಿಕ್ ನಂತರದ ಬಾಲಕಿಯರ ಮತ್ತು ಬಾಲಕರ ವಸತಿ ನಿಲಯಗಳ ಕಟ್ಟಡ ನಿರ್ಮಾಣ ಮತ್ತು ಗಜೇಂದ್ರಗಡ ಹಾಗೂ ನರೇಗಲ್ ಪಟ್ಟಣಗಳಲ್ಲಿ 2 ವಸತಿ ನಿಲಯಗಳ ಪ್ರಾರಂಭೋತ್ಸವ, ಸಣ್ಣ ನೀರಾವರಿ ಇಲಾಖೆಯಿಂದ 650 ಲಕ್ಷ ರೂ. ವೆಚ್ಚದಡಿ ಡಂಬಳ, ಪೇಠಾಲೂರ ಮತ್ತು ಜಂತ್ಲಿ-ಶಿರೂರ ಗ್ರಾಮಗಳ ಕೆರೆ ಅಭಿವೃದ್ಧಿ ಹಾಗೂ ಸವಡಿ- ಹೊನ್ನಪುರ ಬ್ರಿಡ್ಜ್ ಕಂ ಬ್ಯಾರೇಜ್ ನಿರ್ಮಾಣ, ಜಲಸಂಪನ್ಮೂಲ ಇಲಾಖೆಯಿಂದ 395 ಲಕ್ಷ ರೂ. ವೆಚ್ಚದಡಿ ರೋಣ ಪಟ್ಟಣದಲ್ಲಿ ಪ್ರವಾಸಿ ಮಂದಿರ ಕಟ್ಟಡ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯಿಂದ 287.30 ಲಕ್ಷ ರೂ. ವೆಚ್ಚದಡಿ ರೋಣದಲ್ಲಿ ಸರ್ಕಾರಿ ಪದವಿಪೂರ್ವ ಕಾಲೇಜು ಕೊಠಡಿಗಳ ನಿರ್ಮಾಣ ಹಾಗೂ ಡಂಬಳ ಗ್ರಾಮದಲ್ಲಿ ಕಸ್ತೂರಬಾ ಗಾಂಧಿ ಬಾಲಿಕಾ ವಿದ್ಯಾಲಯ, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯಿಂದ 93.81 ಲಕ್ಷ ರೂ. ವೆಚ್ಚದಡಿ ಡಂಬಳದಲ್ಲಿ ಮಲತ್ಯಾಜ್ಯ ಸಂಸ್ಕರಣಾ ಘಟಕ ನಿರ್ಮಾಣ, ಪ್ರವಾಸೋದ್ಯಮ ಇಲಾಖೆಯಿಂದ 50 ಲಕ್ಷ ರೂ. ವೆಚ್ಚದಡಿ ಜಿಗಳೂರು ಕೆರೆ ಪಕ್ಕದಲ್ಲಿ ಪ್ರವಾಸಿ ಉದ್ಯಾನವನ.

ಉದ್ಘಾಟನಾ ಕಾಮಗಾರಿಗಳ ವಿವರ: ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಿಂದ 1,000 ಲಕ್ಷ ರೂ. ವೆಚ್ಚದಲ್ಲಿ ಮೇವುಂಡಿ ಗ್ರಾಮದಲ್ಲಿ ಮೊರಾರ್ಜಿ ದೇಸಾಯಿ ವಸತಿ ಶಾಲೆ ಉದ್ಘಾಟನೆ, ಗಜೇಂದ್ರಗಡದಲ್ಲಿ ವಸತಿ ನಿಲಯ ಹಾಗೂ ರೋಣ ಪಟ್ಟಣದಲ್ಲಿ ವಸತಿ ಶಾಲೆ ಪ್ರಾರಂಭೋತ್ಸವ, ಪೌರಾಡಳಿತ ಇಲಾಖೆಯಿಂದ 392,01 ಲಕ್ಷ ರೂ. ವೆಚ್ಚದಲ್ಲಿ ರೋಣ, ಗಜೇಂದ್ರಗಡ ಹಾಗೂ ನರೇಗಲ್ ಪಟ್ಟಣಗಳಲ್ಲಿ ಇಂದಿರಾ ಕ್ಯಾಂಟೀನ್ ಉದ್ಘಾಟನೆ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ 250 ಲಕ್ಷ ರೂ. ವೆಚ್ಚದಡಿ ಹಿರೇವಡ್ಡಟ್ಟಿ ಗ್ರಾಮದಲ್ಲಿ ಮೆಟ್ರಿಕ್ ಪೂರ್ವ ಬಾಲಕರ ವಸತಿ ನಿಲಯದ ಕಟ್ಟಡ, ಆರೋಗ್ಯ ಇಲಾಖೆಯಿಂದ 91.75 ಲಕ್ಷ ರೂ. ವೆಚ್ಚದಡಿ ಸವಡಿ ಪ್ರಾಥಮಿಕ ಆರೋಗ್ಯ ಕೇಂದ್ರದ ಸಿಬ್ಬಂದಿ ವಸತಿ ಗೃಹ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾ ಇಲಾಖೆಯಿಂದ 27 ಲಕ್ಷ ರೂ. ವೆಚ್ಚದಡಿ ಅಬ್ಬಿಗೇರಿ ಸಾರ್ವಜನಿಕ ಗ್ರಂಥಾಲಯ ನಿರ್ಮಾಣ ಕಾಮಗಾರಿಗಳ ಉದ್ಘಾಟನೆಯಾಗಲಿದೆ.

# ವಿಶೇಷ ಆಸಕ್ತಿಯಿಂದ ಕೆಲಸ ನಿರ್ವಹಿಸಿ

▶▶ಮೊದಲನೇ ಪುಟದಿಂದ

ಅಗ್ನಿಶಾಮಕ ದಳವು ಹರ್ಲಾಪುರ ಗ್ರಾಮ, ರೋಣದಲ್ಲಿ ಜರುಗುವ ಕಾರ್ಯಕ್ರಮದ ಹತ್ತಿರ ಅಗ್ನಿಶಾಮಕ ವಾಹನ ಸೇರಿದಂತೆ ಸಂಬಂಧಿಸಿದ ವ್ಯವಸ್ಥೆಯನ್ನು ನೋಡಿಕೊಳ್ಳಬೇಕು. ಪ್ರವಾಸಿ ಮಂದಿರಗಳನ್ನು ಸ್ವಚ್ಛಗೊಳಿಸಿ ಬಂದ ಅತಿಥಿಗಳಿಗೆ ಸೂಕ್ತ ವ್ಯವಸ್ಥೆ ಮಾಡಬೇಕು. ರೋಣ ತಾಲೂಕಿನ ವಿವಿಧ ಅಭಿವೃದ್ಧಿ ಕಾಮಗಾರಿಗಳ ಉದ್ಘಾಟನಾ ಸಮಾರಂಭಕ್ಕೆ ಬೇಕಾದ ಸಕಲ ಸಿದ್ಧತೆಯನ್ನು ಸಂಬಂಧಿಸಿದ ಇಲಾಖಾ ಅಧಿಕಾರಿಗಳು ಮಾಡಿಕೊಂಡು ಕಾರ್ಯಕ್ರಮ ಯಶಸ್ಸಿಗೆ ಎಲ್ಲರೂ ಶ್ರಮಿಸಬೇಕು ಎಂದು ಹೇಳಿದರು.

ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್ ಮಾತನಾಡಿ, ಕಾರ್ಯಕ್ರಮದ ವಿವಿಧ ಸಮಿತಿಯಲ್ಲಿರುವ ಜಿಲ್ಲಾಮಟ್ಟದ ಅಧಿಕಾರಿಗಳು, ಸಿಬ್ಬಂದಿಗಳ ಸಹಕಾರದೊಂದಿಗೆ ತಮ್ಮಗೆ ನೀಡಿದ ಜವಾಬ್ದಾರಿಯನ್ನು ಅಚ್ಚುಕಟ್ಟಾಗಿ ನಿಭಾಯಿಸಬೇಕು. ವಿವಿಧ ಇಲಾಖೆಯ ಯೋಜನೆಯ ಫಲಾನುಭವಿಗಳಿಗೆ ಪ್ರಮಾಣಪತ್ರ ನೀಡುವವರಿಗೆ ಮುಂಚಿತವಾಗಿ ತಿಳಿಸಬೇಕು ಎಂದು ನುಡಿದರು.

ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎಂ.ಬಿ. ಸಂಕದ ಮಾತನಾಡಿ, ಕಾರ್ಯಕ್ರಮದಲ್ಲಿ ಬರುವ ಎಲ್ಲಾ ವಾಹನಗಳಿಗೆ ಪಾರ್ಕಿಂಗ್ ವ್ಯವಸ್ಥೆ ಮಾಡಲಾಗುವುದು ಎಂದು ತಿಳಿಸಿದರು.

ಸಭೆಯಲ್ಲಿ ಮಿಥುನಗೌಡ ಪಾಟೀಲ, ಎಸಿ ಗಂಗಪ್ಪ, ತಹಸೀಲ್ದಾರಾದ ನಾಗರಾಜ ಕೆ, ಎರಿಸ್ವಾಮಿ, ಪುರಸಭೆ ಮುಖ್ಯಧಿಕಾರಿಗಳು, ಅಧಿಕಾರಿಗಳಾದ ಮಹೇಶ ಪೋತದಾರ, ರವಿ ಗುಂಜಿಕರ, ಶರಣು ಗೋಗೇರಿ, ವಾರ್ತಾಧಿಕಾರಿ ವಸಂತ ಮಡ್ಲೂರ, ತಾರಾಮಣಿ, ಕೊಟ್ರೇಶ್ ವಿಭೂತಿ, ರುದ್ರಗೌಡ ಸೇರಿದಂತೆ ಜಿಲ್ಲಾ, ತಾಲೂಕು ಮಟ್ಟದ ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

# ಕೊಟ್ಟೂರ ಟ್ರೇಡರ್ಸ್ ಶುಭಾರಂಭ

**■ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ಗಂಗಿಮಡಿ ರಸ್ತೆಯ ತಾಜ್‌ನಗರ ಬಳಿ ಮಾಜಿ ನಗರಸಭೆ ನಾಮನಿರ್ದೇಶಕ ಸದಸ್ಯ ಚಾಂದ್‌ಸಾಬ ಕೊಟ್ಟೂರ ಮಾಲೀಕತ್ವದ ಕೊಟ್ಟೂರ ಟ್ರೇಡರ್ಸ್ ಮಳಿಗೆಯನ್ನು ಜಿಲ್ಲಾ ಯುವ ಕಾಂಗ್ರೆಸ್ ಅಧ್ಯಕ್ಷ ಕೃಷ್ಣಗೌಡ ಪಾಟೀಲ ಉದ್ಘಾಟಿಸಿದರು.



ಇದೇ ಸಂದರ್ಭದಲ್ಲಿ ಯುವ ಕಾಂಗ್ರೆಸ್ ಅಧ್ಯಕ್ಷ ಕೃಷ್ಣಗೌಡ ಪಾಟೀಲರನ್ನು ಸನ್ಮಾನಿಸಲಾಯಿತು. ಮನೆ ಕಟ್ಟಲು ಅಗತ್ಯವಿರುವ ಬ್ಲಾಕ್ ಇಟ್ಟಿಗೆ, ವಿವಿಧ ಕಂಪನಿಗಳ ಸಿಮೆಂಟ್ ಸೇರಿದಂತೆ ಇನ್ನಿತರೆ ವಸ್ತುಗಳನ್ನು ಈ ಒಂದೇ ಮಳಿಗೆಯಲ್ಲಿ ಸಾರ್ವಜನಿಕರು ಪಡೆದುಕೊಳ್ಳಬಹುದಾಗಿದೆ.

ಈ ಸಂದರ್ಭದಲ್ಲಿ ಶಾಂತಣ್ಣ ಮುಳವಾಡ, ಬಿ.ಬಿ. ಅಸೂಟಿ, ಬರಕತಅಲಿ ಮುಲ್ಲಾ, ಆರಿಫ್ ಹುನಗುಂದ, ಯೂಸುಫ್ ಕೊಟ್ಟೂರು, ಕೆ.ಆರ್. ಸುಣ್ಣಗಾರ್, ಜಹೀರ್ ಅಬ್ಬಾಸ್, ಎಂ.ಕೊಪ್ಪಳ, ಮೌಲಾನ ಅಂಜಲ್ ಹುಸೇನ್, ಡಾ. ಮಸೂತಿಮನಿ, ರೆಹಮಾನ್‌ಸಾಬ್ ದಂಡಿನ್, ಸೈಯದ್ ಇಸ್ಮಾಯಿಲ್ ರಿಹಾನ್ ಕೊಟ್ಟೂರ್, ಹಿಡ್ಕಿಮಠ ಗುರುಗಳು, ಜೂನ್‌ಸಾಬ ಉಮಚಗಿ, ಅಸ್ಲಂ ಜಮಾಲ್‌ಖಾನ್, ಪ್ರದೀಪ್ ಚವಡಿ ಮುಂತಾದವರು ಉಪಸ್ಥಿತರಿದ್ದರು.


ಕರ್ನಾಟಕ ಸರಕಾರ (ಜಿಲ್ಲಾ ಪಂಚಾಯತ್, ಗದಗ)

**ಕಾರ್ಯನಿರ್ವಾಹಕ ಇಂಜಿನೀಯರ, ಪಂಚಾಯತ್ ರಾಜ್ ಇಂಜಿನೀಯರಿಂಗ್ ವಿಭಾಗ, ಗದಗ.**

ನಂ:ಪಂ.ರಾಜ್.ಇಂ.ವಿ/ಗದಗ/ಪಿಬಿ.3/ಟೆಂಡರ/2024-25/2544

ದಿನಾಂಕ : 13-12-2024

**ಕೆಪಿಪಿ ಪೋರ್ಟಲ್ ಟೆಂಡರ ಪ್ರಕಟಣೆ**

**Standard Bid Document KW- 1,2,&KG-1**

ಕರ್ನಾಟಕ ಸಾರ್ವಜನಿಕ ಪಾರದರ್ಶಕತೆ ಆಕ್ಟ್-2000 ನಿಯಮದಂತೆ Standard Bid Document KW-1,2 & KG-1ರ ನಿಯಮಗಳನ್ವಯ ಅರ್ಹ ಗುತ್ತೇದಾರರಿಂದ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳ ಪೋರ್ಟಲ್ ಮುಖಾಂತರ **20** ಕಾಮಗಾರಿಯ ಟೆಂಡರನ್ನು ಆಹ್ವಾನಿಸಲಾಗಿದೆ.

**ಲೆಕ್ಕ ಶೀರ್ಷಿಕೆ** : 2024-25 ನೇ ಸಾಲಿನ ಆರೋಗ್ಯ ಇಲಾಖೆ (2210-00-101-0-36) ಕಟ್ಟಡಗಳ ಯೋಜನೆ, 2024-25 ನೇ ಸಾಲಿನ ಜಿಲ್ಲಾ ಪಂಚಾಯತ್ ಅನಿರ್ಭಂದಿತ ಅನುದಾನ ಯೋಜನೆ, 2024-25 ನೇ ಸಾಲಿನ ತಾಲ್ಲೂಕು ಪಂಚಾಯತ್ ಅನಿರ್ಭಂದಿತ ಅನುದಾನ ಯೋಜನೆ, 2024-25 ನೇ ಸಾಲಿನ 5054 ಎಸ್.ಸಿ.ಪಿ/ಟಿ.ಎಸ್.ಪಿ ಯೋಜನೆ, 2024-25 ನೇ ಸಾಲಿನ MGNREGA ಯೋಜನೆ, 2023-24 4202 ವಿಶೇಶ ಆಕಾಂಕ್ಷಿ ಯೋಜನೆ 2023-24 ನೇ ಸಾಲಿನ 5054 ಮಾನ್ಯ ಮುಖ್ಯಮಂತ್ರಿಗಳ ವಿಶೇಷ ಅನುದಾನದಡಿ ಟೆಂಡರನ್ನು ಆಹ್ವಾನಿಸಲಾಗಿದೆ. ಪಿ.ಡಬ್ಲು.ಡಿ. ಇಲಾಖೆಯಲ್ಲಿ ನೊಂದಾಯಿತ ಅರ್ಹ ಗುತ್ತಿಗೆದಾರರು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳ ಪೋರ್ಟಲ್, (https://kppp.karnataka.gov.in) ಮುಖಾಂತರ ಭಾಗವಹಿಸಬಹುದು. ಕಾಮಗಾರಿಗಳ ವರ್ಕ ಇಂಡೆಂಟ್ ಸಂಖ್ಯೆ ಈ ಕೆಳಗಿನಂತೆ ಇರುತ್ತವೆ.

**Indent Nos : RDPR/2024-25/WORK_INDENT : 5790, 5730, 10978, 10977, 5906,8 942/call2, 10795, 10794, 11194, 11182, 11148, 11183, 10153, 11273, 11310, 11297, 11283, 11282, 8381, 11421**

ಟೆಂಡರಿಗಿಟ್ಟ ಕನಿಷ್ಠ ಮೊತ್ತ ರೂ. **2.50** ಲಕ್ಷ ಮತ್ತು ಗರಿಷ್ಠ ಮೊತ್ತ ರೂ. **41.88** ಲಕ್ಷಗಳು ಟೆಂಡರ ಅರ್ಜಿಯ ಬೆಲೆ ಹಾಗೂ ಇ.ಎಂ.ಡಿ ಮೊತ್ತದ ವಿವರ:- ಅರ್ಜಿ ಬೆಲೆ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳ ಪೋರ್ಟಲ್ ಇ.ಎಂ.ಡಿ. ಸಂಬಂದಪಟ್ಟ ವರ್ಕ ಇಂಡೆಂಟ್‌ನಲ್ಲಿ ನೋಡಬಹುದಾಗಿದೆ.

ಇ-ಪ್ರೋಕ್ಯೂರಮೆಂಟ ಮುಖಾಂತರ ಅರ್ಜಿ ಹಾಗೂ ಶೆಡ್ಯೂಲ್-ಬಿ ಯನ್ನು ವೆಬಸೈಟಿನಲ್ಲಿ ಭರ್ತಿ ಮಾಡಿ ಸಲ್ಲಿಸುವ ದಿನಾಂಕ: **16-12-2024** ರಿಂದ **31-12-2024** ರಂದು 16.30 ಗಂಟೆಯವರೆಗೆ. ಆರ್ಥಿಕ ಬಿಡ್ ತೆರೆಯುವ ದಿನಾಂಕ : **01-01-2025** ರಂದು 16.30 ಗಂಟೆಗೆ ತೆರೆಯಲಾಗುವುದು. ಟೆಂಡರನ್ನು ಅನಾವರಣಗೊಳಿಸಿದ ದಿನಾಂಕದಿಂದ ಭಾಗವಹಿಸಿದ ಗುತ್ತಿಗೆದಾರರಲ್ಲಿ ಆರ್ಥಿಕ ಬಿಡ್‌ದಲ್ಲಿ ಅರ್ಹ ಗುತ್ತಿಗೆದಾರರು ಈ ಕಾರ್ಯಾಲಯಕ್ಕೆ ಹಾಜರಾಗಿ ವ್ಯತ್ಯಾಸದ ಮೊತ್ತ ಹಾಗೂ ಪಿ.ಎಸ್.ಡಿ. ಮೊತ್ತವನ್ನು ಎಫ್.ಡಿ.ಆರ್ ರೂಪದಲ್ಲಿ 20 ದಿನಗಳ ಒಳಗಾಗಿ (ಷರತ್ತು ಕ್ರ.ಸಂ :13 ರಂತೆ) ಭರಣಾ ಮಾಡಬೇಕು. ಇ-ಪದ್ಧತಿ ಇರುವುದರಿಂದ ಕಾಗದ ರಹಿತವಾಗಿದ್ದು ಯಾವುದೇ ಪತ್ರ ವ್ಯವವಹಾರಕ್ಕೆ ಅವಕಾಶ ಇರುವುದಿಲ್ಲ. ಹೆಚ್ಚಿನ ಮಾಹಿತಿಯನ್ನು ಈ ಕಚೇರಿಯ ಕೆಲಸದ ವೇಳೆಯಲ್ಲಿ ಪಡೆಯಬಹುದು.

ಸಹಿ/- ಕಾರ್ಯನಿರ್ವಾಹಕ ಇಂಜಿನೀಯರರು,
ಪಂ.ರಾಜ್. ಇಂಜಿನೀಯರಿಂಗ್ ವಿಭಾಗ,
ಗದಗ

ವಾಸಾಸಂಇ/ಗದಗ/ಕೆಎಸ್ಎಂಸಿಎ/460/2024-25


# ಸಂಘದ ಕಚೇರಿಗೆ ಕೊಠಡಿ ನೀಡಲು ಮನವಿ

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ತಾಲೂಕಾ ಸರಕಾರಿ ನೌಕರರ ಸಂಘದ ಕಚೇರಿಯನ್ನು ತಾತ್ಕಾಲಿಕವಾಗಿ ಪ್ರಾರಂಭಿಸಲು ಪುರಸಭೆಯ ಖಾಲಿ ಇರುವ ಕೊಠಡಿಯನ್ನು ನೀಡುವಂತೆ ಲಕ್ಷ್ಮೇಶ್ವರ ತಾಲೂಕ ಕರ್ನಾಟಕ ರಾಜ್ಯ ಸರಕಾರಿ ನೌಕರರ ಸಂಘದ ಅಧ್ಯಕ್ಷ ಜಿ.ಡಿ. ಹವಳದ ಅವರ ನೇತೃತ್ವದಲ್ಲಿ ಶುಕ್ರವಾರ ಪುರಸಭೆ ಅಧ್ಯಕ್ಷರಿಗೆ ಹಾಗೂ ಮುಖ್ಯಾಧಿಕಾರಿಗಳಿಗೆ ಮನವಿ ಅರ್ಪಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಸಂಘದ ಅಧ್ಯಕ್ಷ ಜಿ.ಡಿ. ಹವಳದ, ಸರಕಾರಿ ನೌಕರರು ಈ ಸಂಘದ ಸದಸ್ಯರಿದ್ದು, ಸಭೆಗಳನ್ನು ನಡೆಸಲು ಹಾಗೂ ಪದಾಧಿಕಾರಿಗಳು ಕುಳಿತು ಚರ್ಚಿಸಲು ಕಚೇರಿಯ ಅವಶ್ಯಕತೆಯಿದೆ. ಸಂಘಕ್ಕೆ ತಾತ್ಕಾಲಿಕವಾಗಿ ಬಾನುಮಾರ್ಕೆಟ್ ಮೇಲುಗಡೆ ಅಂತಸ್ತಿನಲ್ಲಿರುವ ಗ್ರಾಮ ಆಡಳಿತ ಅಧಿಕಾರಿಗಳ ಕಚೇರಿಯ ಪಕ್ಕದಲ್ಲಿ ಖಾಲಿ ಇರುವ ಒಂದು ಕೊಠಡಿಯನ್ನು ತಾತ್ಕಾಲಿಕ ಕಚೇರಿ ಆರಂಭಿಸಲು ನೀಡಬೇಕೆಂದು ಮನವಿ ಮಾಡುವದಾಗಿ ಹೇಳಿದರು.



ಪುರಸಭೆ ಅಧ್ಯಕ್ಷೆ ಯಲ್ಲವ್ವ ದುರ್ಗಣ್ಣವರ ಮನವಿ ಸ್ವೀಕರಿಸಿ, ಆಡಳಿತ ಮಂಡಳಿ ಸಭೆಯಲ್ಲಿ ಈ ಕುರಿತು ವಿಷಯ ಪ್ರಸ್ತಾಪಿಸಿ ಸೂಕ್ತ ನಿರ್ಧಾರ ಕೈಗೊಳ್ಳುವದಾಗಿ ಹೇಳಿದರು. ಈ ಸಂದರ್ಭದಲ್ಲಿ ಪುರಸಭೆ ಹಿರಿಯ ಸದಸ್ಯರಾದ ರಾಜಣ್ಣ ಕುಂಬಿ, ವಿಜಯ ಕರಡಿ, ಮುಖ್ಯಾಧಿಕಾರಿ ಮಹೇಶ ಹಡಪದ, ತಾಲೂಕು ನೌಕರ ಸಂಘದ ಕಾರ್ಯದರ್ಶಿ ಎಂ.ಎ. ನದಾಫ್, ಖಜಾಂಚಿ ವಾರದ್, ನೌಕರ ಸಂಘದ ನಿಕಟಪೂರ್ವ ಅಧ್ಯಕ್ಷ ಡಿ.ಎಚ್. ಪಾಟೀಲ್, ಶಿಕ್ಷಕರ ಸಂಘದ ಕಾರ್ಯದರ್ಶಿ ಚಂದ್ರು ನೇಕಾರ್, ಬಸವರಾಜ್ ಯತ್ನಳ್ಳಿ, ಸರ್ಕಾರಿ ನೌಕರ ಸಂಘದ ನಿರ್ದೇಶಕರಾದ ಸಂತೋಷ್ ಗುಂಜಳ್, ಬಸವರಾಜ್ ಯರಗುಪ್ಪಿ, ಫಕೀರಪ್ಪ ಹೂಗಾರ್, ಪ್ರಶಾಂತ್ ಸನದಿ, ಶ್ರೀಕಾಂತ್ ಬಾಲೆಹೊಸೂರ್, ಎ.ಎಂ. ಅಕ್ಕಿ. ಡಿ.ಡಿ. ಲಮಾಣಿ ಹಾಗೂ ನೌಕರ ಸಂಘದ ನಿರ್ದೇಶಕರು ಹಾಗೂ ಶಿಕ್ಷಕರ ಸಂಘದ ನಿರ್ದೇಶಕರು ಹಾಜರಿದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka